ಸಂಪುಟ : 10 ಸಂಚಿಕೆ 16 ಪುಟ : 4+2 ಬೆಲೆ: 3.00 ಬುಧವಾರ ಫೆಬ್ರವರಿ 12 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 16 Pages : 4+2 Price : 3.00 Wednesday February 12 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸ್ನಾನಕ್ಕೆ ನದಿಗೆ ಇಳಿದಿದ್ದ ಮಾವ-ಅಳಿಯ ನೀರು ಪಾಲು! ಇಬ್ಬರು ಪಾರು!

■ವಿಜಯಸಾಕ್ಷಿ ಸುದ್ದಿ, ಗದಗ

ಸ್ನಾನಕ್ಕಾಗಿ ನದಿಗೆ ಇಳಿದಿದ್ದ ಮಾವ ಹಾಗೂ ಅಳಿಯ ನೀರುಪಾಲಾದ ಘಟನೆ ಗದಗ ಜಿಲ್ಲೆಯ ರೋಣ ತಾಲೂಕಿನ ಹೊಳೆಆಲೂರಿನಲ್ಲಿ ಜರುಗಿದೆ.

ಮಲಪ್ರಭಾ ನದಿಯಲ್ಲಿ ಸ್ನಾನ ಮಾಡಲು ಹೋಗಿದ್ದ ಗದಗ ನಗರದ ಮುಂಡರಗಿ ರಸ್ತೆಯ ಹೊಸ ಬಸ್ ನಿಲ್ದಾಣದ ಬಳಿ ಇರುವ 76ಪ್ಲಾಟ್ ನಿವಾಸಿ ಗಂಗಪ್ಪ ಕೊಡ್ಲಿ (37) ಹಾಗೂ ಕೊಪ್ಪಳದ ಗಾಂಧಿನಗರ ನಿವಾಸಿ ನಾಗರಾಜ್ ಮಾಳಗಿಮನಿ ನೀರುಪಾಲಾದವರು.

ಒಟ್ಟು ನಾಲ್ಕು ಜನ ಮಲಪ್ರಭಾ ನದಿಯಲ್ಲಿ ಸ್ನಾನಕ್ಕಾಗಿ ಇಳಿದಿದ್ದರು. ಅದರಲ್ಲಿ ಇಬ್ಬರು ಈಜಿ ದಡ ಸೇರಿದ್ದಾರೆ. ಆದರೆ ಇನ್ನಿಬ್ಬರು ನೀರಿನ ಸೆಳೆತದಿಂದ ಹೊರಗೆ ಬರಲು ಸಾಧ್ಯವಾಗದೇ ನೀರು ಪಾಲಾಗಿದ್ದಾರೆ.

ಮಲಪ್ರಭೆಗೆ 'ಗಂಗಾಪೂಜೆ' ಮಾಡಲು ಗದಗ ನಗರದಿಂದ ಬಂದಿದ್ದರು ಎನ್ನಲಾಗಿದೆ. ನೀರು ಪಾಲಾದವರಿಗಾಗಿ ಸ್ಥಳೀಯರ ಸಹಾಯದಿಂದ ಅಗ್ನಿಶಾಮಕ ದಳದವರು ಶೋಧ ಕಾರ್ಯ ನಡೆಸಿದರೂ ಸುಳಿವು ಸಿಕ್ಕಿಲ್ಲ. ಕತ್ತಲಾಗಿದ್ದರಿಂದ ಶೋಧ ಕಾರ್ಯಾಚರಣೆ ಸ್ಥಗಿತಗೊಂಡಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲ ಮುಟ್ಟಿದೆ. ರೋಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

### ಶಿರಹಟ್ಟಿ ತಾ.ಪಂ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಸೂಚನೆ

# ಕೆಲಸ ಪೂರ್ಣಗೊಳಿಸದವರನ್ನು ಬ್ಲಾಕ್‌ಲಿಸ್ಟ್‌ಗೆ ಸೇರಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನಲ್ಲಿ ಜೆಜೆಎಂ ಕಾಮಗಾರಿ ಅಪೂರ್ಣಗೊಂಡಿರುವ ಬಗ್ಗೆ ಗ್ರಾಮ ಪಂಚಾಯಿತಿ ಅಧ್ಯಕ್ಷರು/ಉಪಾಧ್ಯಕ್ಷರು ಮತ್ತು ಸರ್ವ ಸದಸ್ಯರ ಸಮಕ್ಷಮ ಠರಾವು ಬರೆಯಿಸಿ ಮೇಲಧಿಕಾರಿಗಳಿಗೆ ವರದಿ ನೀಡಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಸೂಚಿಸಿದರು.

ಅವರು ಮಂಗಳವಾರ ಶಿರಹಟ್ಟಿಯ ತಾ.ಪಂ ಸಭಾಭವನದಲ್ಲಿ ಜರುಗಿದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಬಗ್ಗೆ ವಿಶೇಷ ಸಭೆಯನ್ನು ನಡೆಸಬೇಕು. ಬಾಕಿ ಉಳಿದಿರುವ ಸಂಖ್ಯೆ, ಎಷ್ಟು ಬಿಲ್ ಆಗಿದೆ, ಗುತ್ತಿಗೆದಾರರ ರಾಯಲ್ಟಿ ಎಷ್ಟಿದೆ ಎನ್ನುವುದರ ಬಗ್ಗೆಯೂ ಸಹ ಮಾಹಿತಿ ನೀಡಬೇಕು. ನೋಟೀಸ್ ನೀಡಿದರೂ ಕೆಲಸ ಪೂರ್ಣಗೊಳಿಸದ ಗುತ್ತಿಗೆದಾರರನ್ನು ಬ್ಲಾಕ್‌ಲಿಸ್ಟ್‌ಗೆ ಸೇರಿಸುವುದರ ಜೊತೆಗೆ ಕ್ರಿಮಿನಲ್ ಕೇಸ್ ದಾಖಲಿಸಲು ಮಾಹಿತಿಯನ್ನು ಕ್ರೋಢೀಕರಿಸಿ ಎಂದು ಆರ್‌ಡಬ್ಲ್ಯುಎಸ್ ಅಧಿಕಾರಿಗೆ ಸೂಚನೆ ನೀಡಿದರು.

ಕೆಶಿಫ್‌ನಿಂದ ರಾಜ್ಯ ಹೆದ್ದಾರಿ ಕಾಮಗಾರಿ ವೇಳೆ ಕುಡಿಯುವ ನೀರಿನ ಪೈಪ್‌ಲೈನ್‌ಗಳು ಒಡೆದುಹೋಗಿದ್ದು, ಇವುಗಳನ್ನು ಸರಿಪಡಿಸುವುದಕ್ಕೆ ಸಂಬಂಧಿಸಿದವರಿಗೆ ಪತ್ರ ಬರೆಯಬೇಕು. ಜೊತೆಗೆ ಎಲ್ & ಟಿಯವರಿಂದ ಕುಡಿಯುವ ನೀರು ಸರಬರಾಜು ಮಾಡಿದ ಬಗ್ಗೆ ತೆರಿಗೆ



ಬರಬೇಕಿದ್ದು, ಅದರ ವಸೂಲಿಗೆ ಕ್ರಮ ವಹಿಸಬೇಕು. ಮುಂದಿನ ದಿನಗಳಲ್ಲಿ ಪೌರಕಾರ್ಮಿಕರ ಆರೋಗ್ಯದ ದೃಷ್ಟಿಯಿಂದ ಅವರಿಗೆ ಸೂಕ್ತ ಚಿಕಿತ್ಸೆಯನ್ನು ಒದಗಿಸಲು ಆದ್ಯತೆ ನೀಡಬೇಕೆಂದು ಶಾಸಕರು ಮುಖ್ಯಾಧಿಕಾರಿಗೆ ಸೂಚಿಸಿದರು.

ತಾಲೂಕಿನಲ್ಲಿ 2500 ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಪರೀಕ್ಷೆಯನ್ನು ಬಯಸಿದ್ದು, ಇದರಲ್ಲಿ ಇತ್ತೀಚೆಗೆ ಜರುಗಿದ ಕಿರು ಪರೀಕ್ಷೆಯಲ್ಲಿ 590 ವಿದ್ಯಾರ್ಥಿಗಳು ಜಸ್ಟ್ ಪಾಸ್, 411 ವಿದ್ಯಾರ್ಥಿಗಳು ಫೇಲ್ ಆಗಿದ್ದು, ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ ಎಂದು ಬಿಇಓ ನಾಯ್ಕ ಸಭೆಗೆ ತಿಳಿಸಿದರು. ಎಲ್ಲ ವಿದ್ಯಾರ್ಥಿಗಳಿಗೂ ಸಹ ಗುಣಮಟ್ಟದ ಶಿಕ್ಷಣವನ್ನು ನೀಡಬೇಕೆಂದು ಶಾಸಕ ಸೂಚಿಸಿದರು. ಶಿರಹಟ್ಟಿಯ ಸಿಸಿಎನ್ ಸರಕಾರಿ ಪ್ರೌಢಶಾಲೆಯಲ್ಲಿ ಮುಖ್ಯಾಧಿಕಾರಿಯಿಂದ ಹಣಕಾಸಿನ ವ್ಯವಹಾರದಲ್ಲಿ ಲೋಪ-ದೋಷವಾಗಿರುವ ಬಗ್ಗೆ ದೂರುಗಳು ಕೇಳಿ ಬರುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಶಾಸಕ ಡಾ. ಲಮಾಣಿ ಸೂಚಿಸಿದರು.

ಜಿ.ಪಂ ಮುಖ್ಯ ಯೋಜನಾಧಿಕಾರಿ ಹಾಗೂ ತಾ.ಪಂ ಆಡಳಿತಾಧಿಕಾರಿ ನಿರ್ಮಲಾ ಕೆ, ತಹಸೀಲ್ದಾರ ಅನಿಲ ಬಡಿಗೇರ, ತಾ.ಪಂ ಇಓ ಆರ್.ವಿ. ದೊಡ್ಡಮನಿ, ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಶಿರಹಟ್ಟಿ ಪ.ಪಂ ವ್ಯಾಪ್ತಿಯಲ್ಲಿ ಅಭಿವೃದ್ಧಿಯಾಗದೇ ಹ್ಯಾಂಡ್ ಓವರ್ ನೀಡಿದ್ದೀರಿ. ಸಂಬಂಧಿಸಿದವರಿಗೆ ನೋಟೀಸ್ ನೀಡಿ ನಿವಾಸಿಗಳಿಗೆ ಮೂಲ ಸೌಕರ್ಯ ಒದಗಿಸುವಂತೆ ಸೂಚನೆ ನೀಡಿ. ಇಲ್ಲದಿದ್ದರೆ ಅಂತವರ ಆಸ್ತಿಗಳ ಮೇಲೆ ಸರಕಾರದ ಭೋಜಾ ಕೂಡ್ರಿಸುವುದಕ್ಕೆ ವ್ಯವಸ್ಥೆಯನ್ನು ಮಾಡಿಕೊಳ್ಳಬೇಕು. ಶಿರಹಟ್ಟಿ ಪಟ್ಟಣದಲ್ಲಿ 117 ಜನ ಫಲಾನುಭವಿಗಳನ್ನು ಆಶ್ರಯ ಯೋಜನೆಗೆ ಆಯ್ಕೆ ಮಾಡಲಾಗಿದ್ದು, ಇದನ್ನು ನೋಟೀಸ್ ಬೋರ್ಡ್‌ಗೆ ಪ್ರದರ್ಶಿಸಿ, ತಕರಾರುಗಳು ಬಂದರೆ ಸ್ವೀಕರಿಸಿ ಅದಕ್ಕೆ ಸಮರ್ಪಕ ಉತ್ತರ ನೀಡಿ. 15 ದಿನಗಳ ಒಳಗಾಗಿ ಫಲಾನುಭವಿಗಳ ಮನೆಗಳಿಗೆ ತೆರಳಿ ಸಂಪೂರ್ಣ ಮಾಹಿತಿಯನ್ನು ಕ್ರೋಢೀಕರಿಸಬೇಕೆಂದು ಮುಖ್ಯಾಧಿಕಾರಿಗೆ ಶಾಸಕ ಡಾ. ಲಮಾಣಿ ಸೂಚಿಸಿದರು.

### ಅ.ಭಾ.ವೀ.ಮಹಾಸಭಾದ ಕಾರ್ಯಕ್ರಮದಲ್ಲಿ ಹೊಸಳ್ಳಿ ಜಗದ್ಗುರುಗಳ ನುಡಿ

## ದಾಸೋಹಕ್ಕೆ ಲಿಂಗಾಯತ ಮಠಗಳ ಕೊಡುಗೆ ದೊಡ್ಡದು

■ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ವೀರಶೈವ ಲಿಂಗಾಯತ ಮಠ-ಮಂದಿರಗಳು ಅನ್ನದಾಸೋಹ, ಜ್ಞಾನದಾಸೋಹಕ್ಕೆ ಬಹು ದೊಡ್ಡ ಕೊಡುಗೆ ನೀಡಿವೆ ಎಂದು ಹೊಸಳ್ಳಿಯ ಬೂದೀಶ್ವರ ಸಂಸ್ಥಾನಮಠದ ಜ.ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಮಹಾಸಭಾದ ಗದಗ ಜಿಲ್ಲಾ ಘಟಕ ಏರ್ಪಡಿಸಿದ್ದ ಮಹಾಸಭಾದ ಆಜೀವ ಸದಸ್ಯತ್ವ ಅಭಿಯಾನ ಹಾಗೂ ಸಂಘಟನೆಯ ಬಲವರ್ಧನೆಯ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಅನ್ನ ನೀಡಿದ, ಶಿಕ್ಷಣ ನೀಡಿದ ಲಿಂಗಾಯತ ಮಠಗಳ, ಧರ್ಮಗುರುಗಳ, ಹೆತ್ತವರ ಋಣವನ್ನು ನಾವಿಂದು ತೀರಿಸಬೇಕಿದೆ. ವೀರಶೈವ-ಲಿಂಗಾಯತ ಧರ್ಮ ಎಂಬುದು ಬಹಳ ಸರಳ ಧರ್ಮವಾಗಿದ್ದು, ಧರ್ಮದ ತತ್ವ ಸಂದೇಶಗಳನ್ನು ಪರಿಪಾಲಿಸಬೇಕು. ಎಲ್ಲರೂ ಲಿಂಗವನ್ನು ಧರಿಸಬೇಕು. ಲಿಂಗಪೂಜೆ ಮಾಡಿಕೊಳ್ಳಬೇಕು. ಲಿಂಗ+ಆಯತ= ಲಿಂಗಾಯತ ಎಂಬುದಾಗಿದೆ ಎಂದು ವಿಶ್ಲೇಷಿಸಿದ ಪೂಜ್ಯರು, ನಾವಿಂದು ಗೂಟಾಯರಾಗಿದ್ದೇವೆ ಅಂದರೆ ನಮ್ಮ ಕೊರಳಲ್ಲಿ ಇರಬೇಕಾದ ಲಿಂಗವನ್ನು ಕರಡಗಿ (ಗುಂಡಗಡಗಿ) ಯನ್ನು ಮನೆಯಲ್ಲಿ ನೇತು ಹಾಕಿ ಚಿನ್ನಾಭರಣ ಮಾತ್ರ ಹಾಕಿಕೊಂಡು ಭಸ್ಮ ಧರಿಸದೇ ಮುನ್ನಡೆದಿದ್ದೇವೆ ಎಂದರು.

ವೀರಶೈವ-ಲಿಂಗಾಯತರು ಎಂದಿಗಿಂತ ಇಂದು ಸಂಘಟಿಕರಾಗಬೇಕಿದೆ. ಇಂದು ಎಚ್ಚೆತ್ತುಕೊಳ್ಳದಿದ್ದರೆ ಮುಂದೆಂದಿಗೂ ಹದಗೆಡಬಹುದಾದ ವ್ಯವಸ್ಥೆಯನ್ನು ಸುಧಾರಿಸಲು ಸಾಧ್ಯವೇ ಇಲ್ಲ.

▸▸ 4ನೇ ಪುಟಕ್ಕೆ




**ಮನವಿಗೆ ಸ್ಪಂದನೆ**

ಮಹಾಸಭಾದ ರಾಜ್ಯ ಅಧ್ಯಕ್ಷ ಶಂಕರ ಬಿದರಿ ಅವರಿಗೆ ಜಿಲ್ಲಾ ಘಟಕ ಸಲ್ಲಿಸಿದ ಬೇಡಿಕೆಯ ಮನವಿಗೆ ಸ್ಪಂದಿಸಿದರು. ತಾಲೂಕಾ, ಜಿಲ್ಲಾ ಘಟಕದ ಪದಾಧಿಕಾರಿಗಳು ಸೇರಿದಂತೆ ಸಮಾಜಬಾಂಧವರು ತಮ್ಮ ದುಡಿಮೆಯ ಶೇ 2ರಷ್ಟನ್ನು ಧರ್ಮ-ಸಮಾಜ ಕಾರ್ಯಕ್ಕೆ ಬಸವ ಜಯಂತಿ ದಿನ ದೇಣಿಗೆ ನೀಡಬೇಕು. ಅಂದು ಸಂಗ್ರಹಗೊಳ್ಳುವ ದೇಣಿಗೆಯ ಶೇ. 50ರಷ್ಟು ಹಣವನ್ನು ತಾವು ನೀಡುವದಾಗಿ ಶಂಕರ ಬಿದರಿ ಹೇಳಿದರು.

### 'ಸುರಕ್ಷಿತ ಅಂತರ್ಜಾಲ ದಿನ' ಕಾರ್ಯಕ್ರಮದಲ್ಲಿ ಸೈಬರ್ ಇನ್ಸ್‌ಪೆಕ್ಟರ್ ಸಿದ್ದಾರೂಢ ಗಡಾದ

# ಸೈಬರ್ ಅಪರಾಧಗಳ ಬಗ್ಗೆ ಎಚ್ಚರವಾಗಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ವಾಟ್ಸಪ್ ಮೂಲಕ ಬರುವ ಪಿ.ಎಂ ಕಿಸಾನ್, ಬ್ಯಾಂಕ್ ಕೆ.ವೈ.ಸಿ ಅಪ್‌ಡೇಟ್, ವೆಡ್ಡಿಂಗ್ ಕಾರ್ಡ್ ಹೆಸರಿನಲ್ಲಿ ಬರುವ ಎ.ಪಿ.ಕೆ ಫೈಲ್ ಲಿಂಕ್‌ಗಳನ್ನು ಡೌನ್‌ಲೋಡ್ ಮಾಡಬೇಡಿ ಎಂದು ಸೈಬರ್ ಇನ್ಸ್‌ಪೆಕ್ಟರ್ ಸಿದ್ದಾರೂಢ ಗಡಾದ ಹೇಳಿದರು.

ನಗರದ ಜಿಲ್ಲಾಡಳಿತದ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಜಿಲ್ಲಾ ಪೊಲೀಸ್ ಹಾಗೂ ಸಿ.ಇ.ಎನ್ ಕ್ರೈಂ ವಿಭಾಗಗಳ ಸಹಯೋಗದಲ್ಲಿ ಜರುಗಿದ 'ಸುರಕ್ಷಿತ ಅಂತರ್ಜಾಲ ದಿನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪೊಲೀಸ್ ಅಧಿಕಾರಿ, ಟೆಲಿಫೋನ್ ಅಧಿಕಾರಿ ಮತ್ತು ಪಾರ್ಸಲ್/ಕೊರಿಯರ್ ಹೆಸರಿನಲ್ಲಿ ಕರೆಮಾಡಿ ಕಾನೂನು ಬಾಹಿರ ವಸ್ತುಗಳನ್ನು ಹೊರದೇಶಕ್ಕೆ ರವಾನೆ ಮಾಡಿದ್ದೀರಿ, ಅದಕ್ಕಾಗಿ ನಿಮಗೆ ವಿಡಿಯೋ ಕಾಲ್ ಮೂಲಕ ವಿಚಾರಣೆ ಮಾಡಿ ಡಿಜಿಟಲ್ ಅರೆಸ್ಟ್ ಮಾಡುವುದಾಗಿ ಹೆದರಿಸಿ ಹಣ ಪಡೆದುಕೊಂಡು ವಂಚನೆ ಮಾಡುವವರ ಬಗ್ಗೆ ಎಚ್ಚರವಾಗಿರಿ ಎಂದು ಹೇಳಿದರು.

ಸೈಬರ್ ಪೊಲೀಸ್ ಎಂ.ಎಸ್. ತಿಪ್ಪಾಪೂರ ಮಾತನಾಡಿ, ಅಪರಿಚಿತ ಮೂಲದ ಎಸ್.ಎಂ.ಎಸ್, ವಾಟ್ಸಪ್ ಹಾಗೂ ಇತರ ಮೆಸೆಂಜರ್‌ಗಳ ಮೂಲಕ ಸ್ವೀಕರಿಸುವ ಸಂದೇಶ, ಇ-ಮೇಲ್‌ಗಳಲ್ಲಿನ ಲಿಂಕ್‌ಗಳನ್ನು ಕ್ಲಿಕ್ ಮಾಡಬೇಡಿ. ಗೂಗಲ್‌ನಲ್ಲಿ ಕಂಡುಬರುವ ಕಸ್ಟಮರ್ ಕೇರ್ ಸಂಪರ್ಕ ಸಂಖ್ಯೆ, ಇ-ಮೇಲ್ ವಿಳಾಸ ಇತ್ಯಾದಿಗಳನ್ನು ಬಳಸುವ ಮೊದಲು ನೈಜತೆ ಬಗ್ಗೆ ತಿಳಿಯಿರಿ. ಆನ್‌ಲೈನ್ ಮೂಲಕ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡುವ ಅನಧಿಕೃತ ಅಪ್ಲಿಕೇಶನ್‌ಗಳನ್ನು ಬಳಸಬೇಡಿ.


ಆನ್‌ಲೈನ್ ಮೂಲಕ ಕೆಲಸ ಕೊಡಿಸುವುದಾಗಿ ಹಣದ ಬೇಡಿಕೆ ಇಟ್ಟಲ್ಲಿ ಯಾವುದೇ ಕಾರಣಕ್ಕೂ ಹಣ ವರ್ಗಾಯಿಸಬೇಡಿ. ನಿಮ್ಮ ಬ್ಯಾಂಕ್ ಖಾತೆ, ಸಾಮಾಜಿಕ ಜಾಲತಾಣದ ಖಾತೆಗಳಿಗೆ ಕಠಿಣ ಪಾಸ್‌ವರ್ಡ್‌ಗಳನ್ನು ಬಳಸಿ, ಅಲ್ಲದೇ Two Factor Authentication ಕೂಡ ಅಳವಡಿಸಿಕೊಳ್ಳಿ. ಮಕ್ಕಳಿಗೆ ಸಂಭಂಧಪಟ್ಟ ಲೈಂಗಿಕ/ಅಶ್ಲೀಲ ಚಿತ್ರ, ದೃಶ್ಯಾವಳಿಗಳನ್ನು ಆನ್‌ಲೈನ್‌ನಲ್ಲಿ ಹುಡುಕುವುದು ಅಪರಾಧವಾಗುತ್ತದೆ. ಇಂತಹ ಅಶ್ಲೀಲ ದೃಶ್ಯಾವಳಿಗಳು ಕಂಡುಬಂದಲ್ಲಿ www.cybertipline.org ಆನ್‌ಲೈನ್ ಪೋರ್ಟಲ್‌ನಲ್ಲಿ ಮಾಹಿತಿಯನ್ನು ಒದಗಿಸಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸತೀಶ, ಆನಂದ್ ಸಿಂಗ್ ದೊಡ್ಡಮನಿ, ಸೈಬರ್ ಪೊಲೀಸ್ ಠಾಣೆಯ ಸಿಬ್ಬಂದಿಗಳು ಹಾಜರಿದ್ದರು.




ಕಡಿಮೆ ಅವಧಿಯಲ್ಲಿ ಟ್ರೇಡಿಂಗ್ ಮಾಡಿ ಹಣ ದುಪ್ಪಟ್ಟು ಮಾಡಿಕೊಡುವುದಾಗಿ ವಾಟ್ಸಪ್ ಹಾಗೂ ಟೆಲಿಗ್ರಾಮ್ ಮೂಲಕ ಬರುವ ಜಾಹೀರಾತುಗಳನ್ನು ನಂಬಿ ಟ್ರೇಡಿಂಗ್ ಮಾಡಲು ಹಣ ಹೂಡಿಕೆ ಮಾಡಬೇಡಿ. ಅಪರಿಚಿತರೊಂದಿಗೆ ನಿಮ್ಮ ಬ್ಯಾಂಕಿಂಗ್ ಮಾಹಿತಿಗಳಾದ ಕಾರ್ಡ್ ನಂಬರ್, ಮುಕ್ತಾಯದ ಅವಧಿ, ಸಿವಿವಿ, ಓಟಿಪಿ, ಯುಪಿಐ ಪಿನ್ ಮತ್ತು ಎಂ ಪಿನ್ ಮಾಹಿತಿಗಳನ್ನು ಹಂಚಿಕೊಳ್ಳಬೇಡಿ ಎಂದು ಸಿದ್ದಾರೂಢ ಗ್ವಡಾದ ತಿಳಿಸಿದರು.

# ಪಂ. ಉಪಾಧ್ಯಾಯರ ಸಮರ್ಪಣಾ ದಿನ ಆಚರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನ ಸಂಘದ ಸಂಸ್ಥಾಪಕರು ಈಗಿನ ಭಾರತೀಯ ಜನತಾ ಪಾರ್ಟಿಯ ಸಂಸ್ಥಾಪನೆ ಮಾಡಿ ನಮಗೆಲ್ಲರಿಗೂ ಸ್ಫೂರ್ತಿಯಾದರು. ಅಂತ್ಯೋದಯ ಪರಿಕಲ್ಪನೆಯ ಹರಿಕಾರ, ಪ್ರಖರ ರಾಷ್ಟ್ರೀಯವಾದಿ, ಮಹಾನ್ ಚಿಂತಕ ಪಂ. ದೀನ್ ದಯಾಳ ಉಪಾಧ್ಯಾಯರ ಬಲಿದಾನ ದಿನವನ್ನು ಸಮರ್ಪಣಾ ದಿವಸ್ ಎಂದು ಆಚರಿಸಿ, ಭಾರತೀಯ ಜನತಾ ಪಾರ್ಟಿ ಕಾರ್ಯಾಲಯದಲ್ಲಿ ನಮನಗಳನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ನಗರ ಮಂಡಲ ಅಧ್ಯಕ್ಷರಾದ ಸುರೇಶ ಮರಳಪ್ಪನವರ, ಜಿಲ್ಲಾ ಕೋಶಾಧ್ಯಕ್ಷರಾದ ನಾಗರಾಜ ಕುಲಕರ್ಣಿ, ಪ್ರಕೋಷ್ಠಗಳ ಸಹ-ಸಂಯೋಜಕ ರಮೇಶ ಸಜ್ಜಗಾರ, ಪ್ರಮುಖರಾದ ಮಂಜುನಾಥ ಶಾಂತಗೇರಿ, ಅಮರನಾಥ ಗಡಗಿ, ವಿನೋದ ಹಂಸನೂರ ಮುಂತಾದವರು ಉಪಸ್ಥಿತರಿದ್ದರು.

## ಕಾನೂನು ಬಾಹಿರವಾಗಿ ಸಾಲ ನೀಡಿ, ಹಿಂಸೆ ನೀಡುವವರ ಮೇಲೆ ಸುಗ್ರೀವಾಜ್ಞೆ ಅನ್ವಯ: ಸಚಿವ ಎಚ್ ಕೆ ಪಾಟೀಲ್

■ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ಬಾಹಿರವಾಗಿ ಸಾಲ ನೀಡಿ, ಹಿಂಸೆ ನೀಡುವವರ ಮೇಲೆ ಸುಗ್ರೀವಾಜ್ಞೆ ಅನ್ವಯಿಸುತ್ತದೆ ಎಂದು ಕಾನೂನು ಸಚಿವ ಎಚ್ ಕೆ ಪಾಟೀಲ್ ಹೇಳಿದ್ದಾರೆ.

ಗದಗನಲ್ಲಿ ಮಾತನಾಡಿದ ಅವರು, ಯಾರು ಕಾನೂನಾತ್ಮಕ ಸಾಲ ನೀಡ್ತಾರೆ, ರಿಸರ್ವ್ ಬ್ಯಾಂಕ್ ಅಡಿಯಲ್ಲಿ ಕೆಲಸ ಮಾಡುವವರಿಗೆ ಈ ಸುಗ್ರಿವಾಜ್ಞೆ ಅನ್ವಯಿಸೋದಿಲ್ಲ. ಈ ಸುಗ್ರಿವಾಜ್ಞೆ ಖಾಸಗಿ ಲೇವಾದೇವಿದಾರರು ಹಾಗೂ ನೋಂದಣಿ ಇಲ್ಲದವರಿಗೆ ಅನ್ವಯಿಸುತ್ತದೆ. ಅದಲ್ಲದೆ ಈ ಸುಗ್ರಿವಾಜ್ಞೆ ಬಡವರು ಮುಗ್ಧ ಸಾಲಗಾರರ ರಕ್ಷಣೆ ಮಾಡೋ ಉದ್ದೇಶವಾಗಿದೆ ಎಂದರು.



ಇನ್ನೂ ರಾಜ್ಯಪಾಲರು ಸುಗ್ರಿವಾಜ್ಞೆಯನ್ನು ವಾಪಸ್ಸು ಕಳಿಸಿದ ವಿಚಾರವಾಗಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಹಾಗೂ ನಾನು ಚರ್ಚೆ ಮಾಡಿ ನಿನ್ನೆ ಪುನಃ ನಮ್ಮ ನಿಲುವನ್ನು ರಾಜ್ಯಪಾಲರಿಗೆ ಕಳುಹಿಸಿಕೊಟ್ಟಿದ್ದೇವೆ. ಐದು ಅಂಶಗಳ ಕುರಿತು ಸುದೀರ್ಘವಾದ ವಿವರಣೆ ನೀಡಿ ಕಳಿಸಿದ್ದೇವೆ ಎಂದರು. ಅದಲ್ಲದೆ ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್ ನೀಡಿದ ತೀರ್ಪುಗಳ ವಿವರಣೆ ಕೊಟ್ಟಿದ್ದೇವೆ.

ಕೆಲವು ಸಂದರ್ಭದಲ್ಲಿ ರಾಜ್ಯಪಾಲರಿಗೆ ತಪ್ಪು ಗ್ರಹಿಕೆಯಾಗಿದೆ ಆದ್ದರಿಂದ ಅಲ್ಲಿ ವಿವರಣೆ ನೀಡಿದ್ದೇವೆ. ಉದಾಹರಣೆಗೆ 3 ಲಕ್ಷ ಸಾಲ ಇದ್ರೆ, 5 ಲಕ್ಷ ದಂಡ ಹಾಕ್ತೀರಾ ಅಂತಾ ಆಕ್ಷೇಪ ಇತ್ತು. ಸಾಲ ಎಷ್ಟು ಇದೆ ಎನ್ನುವದು ಮುಖ್ಯ ಅಲ್ಲಾ, ಅವ್ರ ಗುನ್ನೆ ಏನ ಮಾಡ್ತಾರೆ ಅದರ ಮೇಲೆ ದಂಡ ಹಾಕುತ್ತವೆ ಎಂದು ಐದು ಅಂಶಗಳ ಕುರಿತು ಸುಧೀ ಸುದೀರ್ಘವಾದ ಮಾಹಿತಿ ನೀಡಿದ್ದೇವೆ ಎಂದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಮುಖಂಡರಾದ ಬಿ ಬಿ ಅಸೂಟಿ, ಅಶೋಕ ಮಂದಾಲಿ ಹಾಗೂ ಉಮರ್ ಫಾರೂಕ್ ಹುಬ್ಬಳ್ಳಿ ಇದ್ದರು.

## ಪತ್ನಿಯ ಒಪ್ಪಿಗೆಯಿಲ್ಲದೆ ಅಸ್ವಾಭಾವಿಕ ಲೈಂಗಿಕ ಕ್ರಿಯೆ ಅಪರಾಧವಲ್ಲ: ಛತ್ತೀಸ್‌ಗಢ ಹೈಕೋರ್ಟ್

■ವಿಜಯಸಾಕ್ಷಿ ಸುದ್ದಿ, ಛತ್ತೀಸ್‌ಗಢ




'ಒಪ್ಪಂದದೊಂದಿಗೆ ಅಥವಾ ಒಪ್ಪಿಗೆಯಿಲ್ಲದೆ ಪ್ರಾಪ್ತ ಪತ್ನಿಯೊಂದಿಗೆ ಲೈಂಗಿಕ ಸಂಬಂಧ ಹೊಂದಿದ್ದಕ್ಕಾಗಿ ಗಂಡನ ಮೇಲೆ ಅತ್ಯಾಚಾರ ಅಥವಾ ಅಸ್ವಾಭಾವಿಕ ಲೈಂಗಿಕತೆಯ ಆರೋಪ ಹೊರಿಸಲಾಗುವುದಿಲ್ಲ' ಎಂದು ಛತ್ತೀಸ್‌ಗಢ ಹೈಕೋರ್ಟ್ ಸೋಮವಾರ ಅಭಿಪ್ರಾಯಪಟ್ಟಿದೆ.

ಲೈಂಗಿಕ ಸಂಭೋಗ/ಅಸ್ವಾಭಾವಿಕ ಸಂಭೋಗದಲ್ಲಿ ಹೆಂಡತಿಯ 'ಸಮ್ಮತಿ' ಹೊಂದಿರುವುದು ಅತ್ಯಲ್ಪ ಎಂದು ನ್ಯಾಯಮೂರ್ತಿ ನರೇಂದ್ರ ಕುಮಾರ್ ವ್ಯಾಸ್ ಅವರ ಏಕ ಪೀಠವು ಹೇಳಿದೆ ಎಂದು 'ಲೈವ್ ಲಾ' ವರದಿ ಮಾಡಿದೆ.

"ಹೀಗಾಗಿ, ಹೆಂಡತಿಯ ವಯಸ್ಸು 15 ವರ್ಷಕ್ಕಿಂತ ಕಡಿಮೆಯಿಲ್ಲದಿದ್ದರೆ, ಗಂಡ ತನ್ನ ಹೆಂಡತಿಯೊಂದಿಗೆ ನಡೆಸುವ ಯಾವುದೇ ಲೈಂಗಿಕ ಸಂಭೋಗ ಅಥವಾ ಲೈಂಗಿಕ ಕ್ರಿಯೆಯನ್ನು ಈ ಸಂದರ್ಭಗಳಲ್ಲಿ ಅತ್ಯಾಚಾರ ಎಂದು ಕರೆಯಲಾಗುವುದಿಲ್ಲ ಎಂಬುದು ಸ್ಪಷ್ಟವಾಗಿದೆ. ಏಕೆಂದರೆ, ಅಸ್ವಾಭಾವಿಕ ಕೃತ್ಯಕ್ಕೆ ಹೆಂಡತಿಯ ಒಪ್ಪಿಗೆ ಇಲ್ಲದಿರುವುದು ಅದರ ಪ್ರಾಮುಖ್ಯತೆಯನ್ನು ಕಳೆದುಕೊಳ್ಳುತ್ತದೆ. ಆದ್ದರಿಂದ, ಮೇಲ್ಮನವಿದಾರನ ವಿರುದ್ಧ ಐಪಿಸಿಯ ಸೆಕ್ಷನ್ 376 ಮತ್ತು 377 ರ ಅಡಿಯಲ್ಲಿ ಅಪರಾಧವನ್ನು ಮಾಡಲಾಗುವುದಿಲ್ಲ ಎಂದು ಈ ನ್ಯಾಯಾಲಯವು ಪರಿಗಣಿಸುತ್ತದೆ" ಎಂದು ಪೀಠವು ವೆಬ್‌ಸೈಟ್‌ನ ಪ್ರಕಾರ ಹೇಳಿದೆ.

ಪ್ರಕರಣ ಹಿನ್ನೆಲೆ ಏನು?

11.12.2017 ರ ರಾತ್ರಿ ಒಬ್ಬ ಗಂಡನೊಬ್ಬ ತನ್ನ ಹೆಂಡತಿಯನ್ನು ಅವಳ ಇಚ್ಛೆಗೆ ವಿರುದ್ಧವಾಗಿ ಅಸ್ವಾಭಾವಿಕ ಲೈಂಗಿಕತೆಗೆ ಒಳಪಡಿಸಿದ್ದಾನೆ ಎಂದು ಆರೋಪಿಸಲಾಗಿದೆ. ಬಳಿಕ, ಮಹಿಳೆಯನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಬೇಕಾಯಿತು.

ಚಿಕಿತ್ಸೆ ಫಲಿಸದೆ ಮಹಿಳೆ ಸಾವನ್ನಪ್ಪಿದಳು. ತನ್ನ ಜೊನೆ ಹೇಳಿಕೆಯಲ್ಲಿ, ಗಂಡ ತನ್ನ ಮೇಲೆ ಬಲವಂತದ ಲೈಂಗಿಕ ಸಂಭೋಗ ನಡೆಸಿದ್ದಾನೆ ಎಂದು ಅವರು ಹೇಳಿದರು. ನಂತರ, ವೈದ್ಯರು ಮಹಿಳೆ ಪೆರಿಟೋನಿಟಿಸ್ ಮತ್ತು ಗುದನಾಳದ ರಂಧ್ರದ ರಕ್ತಸ್ರಾವದಿಂದ ಸಾವನ್ನಪ್ಪಿದ್ದಾಳೆ ಎಂದು ನಿರ್ಧರಿಸಿದರು.

ಆಕೆ ಅಪ್ರಾಪ್ತೆ ಅಲ್ಲದಿದ್ದರೆ ತನ್ನ ಹೆಂಡತಿಯೊಂದಿಗೆ ಲೈಂಗಿಕ ಸಂಭೋಗ ಅಥವಾ ಲೈಂಗಿಕ ಕ್ರಿಯೆಗಳು ಅತ್ಯಾಚಾರವಲ್ಲ ಎಂದು ನ್ಯಾಯಾಲಯವು ತೀರ್ಪು ನೀಡಿತು. ಯಾವುದೇ ಅಸ್ವಾಭಾವಿಕ ಲೈಂಗಿಕತೆಯನ್ನು ಅಪರಾಧವೆಂದು ಪರಿಗಣಿಸಲಾಗುವುದಿಲ್ಲ ಎಂದು ಅದು ಹೇಳಿದೆ.

ವಿಚಾರಣಾ ನ್ಯಾಯಾಲಯದಿಂದ 10 ವರ್ಷಗಳ ಜೈಲು ಶಿಕ್ಷೆ ವಿಧಿಸಲ್ಪಟ್ಟ ಪತಿಯನ್ನು ಎಲ್ಲ ಆರೋಪಗಳಿಂದ ಖುಲಾಸೆಗೊಳಿಸಲಾಯಿತು.

ಗದುಗಿನಲ್ಲಿ ಸಾಹಿತ್ಯ ಅಕಾಡೆಮಿಯ 'ಸೃಜನ ಸಮ್ಮಿಲನ' ಕಾರ್ಯಕ್ರಮದಲ್ಲಿ ಪ್ರೊ. ಚಂದ್ರಶೇಖರ ವಸ್ತ್ರದ

# ಸಾಹಿತ್ಯದಿಂದ ಹೃದಯಗಳು ಬೆಸೆಯುತ್ತವೆ

■ವಿಜಯಸಾಕ್ಷಿ ಸುದ್ದಿ, ಗದಗ

ಸೌಹಾರ್ದದ ಸೆಲೆ ಬತ್ತದ ಹಾಗೆ ನೋಡಿಕೊಳ್ಳುವ ಜವಾಬ್ದಾರಿ ಸಾಹಿತ್ಯಕ್ಕಿರಬೇಕು. ಸಮಾಜದ ಓರೆಕೋರೆಗಳಿಗೆ ಸ್ಪಂದಿಸುವ ಗುಣ ಬರಹಗಾರರನಿಗೆ ಇರಬೇಕಾದುದು ಅಗತ್ಯ. ತನ್ಮೂಲಕ ಸ್ವಾಸ್ಥ್ಯ ಸಮಾಜ ರೂಪುಗೊಳ್ಳಲು ಸಾಧ್ಯವಾಗುತ್ತದೆ. ಹೃದಯಗಳನ್ನು ಬೆಸೆಯುವದು ಸಾಹಿತ್ಯದಿಂದ ಮಾತ್ರ ಸಾಧ್ಯ ಎಂದು ಸಾಹಿತಿ ಪ್ರೊ. ಚಂದ್ರಶೇಖರ ವಸ್ತ್ರದ ತಿಳಿಸಿದರು.

ಅವರು ಸಾಹಿತ್ಯ ಅಕಾಡೆಮಿ ನವದೆಹಲಿ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದ ಜಿಲ್ಲಾ ಕಸಾಪ ಕಾರ್ಯಾಲಯದಲ್ಲಿ ಜರುಗಿದ ಸೃಜನ ಸಮ್ಮಿಲನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಹುಟ್ಟುತ್ತಲೇ ನಾವೆಲ್ಲಾ ಸೃಜನಶೀಲರಾಗಿರುತ್ತವೆ. ನಮ್ಮೆಲ್ಲರ ಬಾಲ್ಯ ಕ್ರಿಯಾಶೀಲತೆಯಿಂದ ಕೂಡಿರುತ್ತದೆ. ಆದರೆ, ಸೃಜನಶೀಲತೆಗೆ ಇಂಬುಗೊಡುವ ಶಿಕ್ಷಣ ವ್ಯವಸ್ಥೆ ಇಲ್ಲದಿರುವರಿಂದ ಹೊಸ ಸೃಷ್ಟಿಯ ಅವಕಾಶಗಳು ನಿರೀಕ್ಷಿತ ಮಟ್ಟದಲ್ಲಿಲ್ಲದಿರುವದನ್ನು ಕಾಣುತ್ತೇವೆ. ಸೃಜನಶೀಲತೆಯ ಭಾಗವಾಗಿರುವ ಸಾಹಿತ್ಯದಿಂದ ಸಮಾಧಾನ ದೊರೆ-ಯುತ್ತದೆ ಎಂದು ತಿಳಿಸಿದರು.




ಕೇಂದ್ರ ಸಾಹಿತ್ಯ ಅಕಾಡೆಮಿಯ ಸಲಹಾ ಸಮಿತಿ ಸದಸ್ಯರಾದ ಬಸವರಾಜ ಸಾದರ ಮಾತನಾಡಿ, ಸಾಹಿತ್ಯದ ಮೂಲಕ ಹೃದಯಗಳನ್ನು ಬೆಸೆಯುವ ಕಾರ್ಯವನ್ನು ಸಾಹಿತ್ಯ ಅಕಾಡೆಮಿ ಮಾಡುತ್ತಿದೆ. ಸಾಮಾನ್ಯವಾಗಿ ಕವಿತೆಗಳನ್ನು ವಾಚಿಸುವ ಅವಕಾಶಗಳು ವೇದಿಕೆಯಲ್ಲಿ ದೊರೆಯುತ್ತವೆ. ಸಣ್ಣಕತೆ, ಪ್ರಬಂಧ ಮುಂತಾದ ಪ್ರಕಾರಗಳ ಅಭಿವ್ಯಕ್ತಿಗೆ ಈ ಕಾರ್ಯಕ್ರಮದ ಮೂಲಕ ಅವಕಾಶ ಕಲ್ಪಿಸಲಾಗಿದೆ. ಇಂದಿನ ಸಂಕೀರ್ಣ ಬದುಕಿಗೆ ಪ್ರೀತಿಯ ಸಂಗಾತವನ್ನು ಸಾಹಿತ್ಯ ನೀಡುತ್ತದೆ ಎಂದು ತಿಳಿಸಿದರು.

ಹೆಸರಾಂತ ಕತೆಗಾರ ಬಾಳಾಸಾಹೇಬ ಲೋಕಾಪೂರ ಹಾಗೂ ಟಿ.ಎಸ್. ಗೊರವರ ಅವ್ವನ ಅಗಾಧತೆಯನ್ನು ಪ್ರತಿಬಿಂಬಿಸುವ ಕತೆ ವಾಚಿಸಿದರು. ನಿರ್ಮಲಾ ಶೆಟ್ಟರ ಗಜಲ್ ಹಾಗೂ ಕವಿತೆಗಳನ್ನು ಪ್ರಸ್ತುತಪಡಿಸಿದರು.

ವೇದಿಕೆ ಮೇಲೆ ಮಾಜಿ ಸಚಿವರಾದ ಎಸ್.ಎಸ್. ಪಾಟೀಲ ಉಪಸ್ಥಿತರಿದ್ದರು. ಡಿ.ಎಸ್. ಬಾಪುರಿ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಡಾ. ರಶ್ಮಿ ಅಂಗಡಿ ವಂದಿಸಿದರು.

ಕಾರ್ಯಕ್ರಮದಲ್ಲಿ ಪ್ರೊ. ಅನ್ನದಾನಿ ಹಿರೇಮಠ, ಪ್ರಕಾಶ ಕಡಮೆ, ಡಾ. ರಾಜಶೇಖರ ದಾನರಡ್ಡಿ, ಡಾ. ನಾಗಪ್ಪ ಸುರಳಿಕೇರಿ, ಬಿ.ಬಿ. ಪಾಟೀಲ, ಡಾ. ಶಿವಪ್ಪ ಕುರಿ, ಸಿ.ಕೆ. ಎಚ್. ಶಾಸ್ತ್ರಿ, ಡಾ. ಅಪ್ಪಣ್ಣ ಹಂಜೆ, ಭಾರತಿ ಕೋಟಿ, ಮಹಾಂತೇಶ ಹಿರೇಕುರುಬರ, ಜಿ.ಎ. ಪಾಟೀಲ, ಎಂ.ವಿ. ಕೆಂಬಾವಿಮಠ, ಎಚ್.ಟಿ. ಸಂಜೀವಸ್ವಾಮಿ, ಶಶಿಕಾಂತ ಕೊರ್ಲಹಳ್ಳಿ, ಸಿ.ಎಂ. ಮಾರನಬಸರಿ, ರಾಜಶೇಖರ ಕರಡಿ, ಬಿ.ಎಸ್. ಹಿಂಡಿ, ಯು.ಎಸ್. ಕಣವಿ, ರತ್ನಾ ಪುರಂತರ, ಪಾರ್ವತಿ ಬೇವಿನಮರದ, ಪ್ರ.ತೋ. ನಾರಾಯಣಪುರ, ಪಂಚಾಕ್ಷರಯ್ಯ ಹಿರೇಮಠ, ಎಚ್.ಪಿ. ಸುಬ್ಬಣ್ಣವರ, ತಿಪ್ಪಾನಾಯ್ಕ, ಶರಣಪ್ಪ ಹೊಸಂಗಡಿ, ಕೆ.ಎಂ. ಅಡವಿ, ಎಂ.ಟಿ. ಕರಿಗಾರ, ರಾಜು ಪಾಟೀಲ, ವಿಜಯ ಕಿರೇಸೂರ, ದಿಲೀಪಕುಮಾರ ಮುಗಳಿ, ಗೌರಾ ಬುಳೆಟ್ಟಿ, ಜಯಶ್ರೀ ಅಂಗಡಿ, ಶಕುಂತಲಾ ಸಿಂಧೂರ, ಅಶೋಕ ಸುತಾರ, ಅಶೋಕ ಸತ್ಯರಡ್ಡಿ, ಪ್ರಶಾಂತ ಪಾಟೀಲ, ಸುರೇಶ ಕುಂಬಾರ, ಶಾಂತಲಾ ಹಂಚಿನಾಳ, ಕೆ.ಜಿ. ವ್ಯಾಪಾರಿ, ಎನ್.ಬಿ. ಝುರೆ ಮೊದಲಾದವರು ಹಾಜರಿದ್ದರು.

## ಆಹಾರ ಇಲಾಖೆ ಉಪನಿರ್ದೇಶಕರಿಗೆ ಹೃದಯಾಘಾತ: ಕಚೇರಿಯೊಳಗೆ ಕುಸಿದು ಬಿದ್ದು ಸಾವು!

■ವಿಜಯಸಾಕ್ಷಿ ಸುದ್ದಿ, ಕೊಡಗು

ಕೊಡಗು ಆಹಾರ ಇಲಾಖೆ ಉಪನಿರ್ದೇಶಕರಿಗೆ ಹೃದಯಾಘಾತವಾಗಿ ಕಚೇರಿಯೊಳಗೆ ಕುಸಿದು ಬಿದ್ದು ಸಾವನ್ನಪ್ಪಿರುವ ಘಟನೆ ನಡೆದಿದೆ.

ಆಹಾರ ಇಲಾಖೆ ಉಪನಿರ್ದೇಶಕ ಜೆ.ಬಿ. ಶ್ರೀಧರ್ ಮೂರ್ತಿ(59) ಮೃತ ದುರ್ದೈವಿಯಾಗಿದ್ದು, ಇಂದು ಬೆಳ್ಳಗ್ಗೆ 11 ಗಂಟೆಗೆ ಸಭೆ ಕರೆದಿದ್ದರು. 11. 20ಕ್ಕೆ ಕಚೇರಿ ಬಂದು ಕುಳಿತಾಕ್ಷಣ ಅಧಿಕಾರಿ ಕುಸಿದು ಬಿದ್ದಿದ್ದಾರೆ. ಆಸ್ಪತ್ರೆಗೆ ಕರೆದೊಯ್ಯುವಾಗಲೇ ಮೃತಪಟ್ಟಿದ್ದಾರೆ. ಚಿತ್ರದುರ್ಗ ಮೂಲದ ಶ್ರೀಧರ್ ಮೂರ್ತಿ ಮಡಿಕೇರಿಗೆ ಬಂದು ಕೇವಲ ಒಂದು ತಿಂಗಳಾಗಿತ್ತು. ಅದಲ್ಲದೆ ಮುಂದಿನ ಆರು ತಿಂಗಳಲ್ಲಿ ನಿವೃತ್ತರಾಗಬೇಕಿತ್ತು. ಆದ್ರೆ ಅಷ್ಟರಲ್ಲೇ ಈ ದುರ್ಘಟನೆ ಸಂಭವಿಸಿದೆ.

## ಎತ್ತಿನಬಂಡಿಗೆ ಬೈಕ್ ಡಿಕ್ಕಿ: ಸ್ಥಳದಲ್ಲೇ ಮೂವರು ಯುವಕರ ದುರಂತ ಸಾವು!

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಮೈಲಾರ ಜಾತ್ರೆಗೆ ಹೊರಟಿದ್ದ ಎತ್ತಿನಗಾಡಿಗೆ ಬೈಕ್ ಗುದ್ದಿದ ಪರಿಣಾಮ ಹನುಮನಮಟ್ಟಿ ಕೃಷಿ ವಿದ್ಯಾಲಯದ ಮೂವರು ವಿದ್ಯಾರ್ಥಿಗಳು ಸಾವನ್ನಪ್ಪಿರುವ ಘಟನೆ ಹಾವೇರಿ ಜಿಲ್ಲೆಯ ರಾಣೆಬೇನ್ನೂರು ತಾಲೂಕಿನ ಗುಡುಗೂರು ಕ್ರಾಸ್ ಬಳಿ ನಡೆದಿದೆ. ಶಶಿಕುಮಾರ್ ಉಪ್ಪಾರ (25), ಆಕಾಶ್ ಬಿರಾದಾರ (23) ಮತ್ತು ದರ್ಶನ್ (23) ಮೃತ ದುರ್ದೈವಿಗಳಾಗಿದ್ದು, ಈ ಮೂವರು ಹನುಮನಮಟ್ಟಿಯಿಂದ ಮೈಲಾರ ಜಾತ್ರೆಗೆ ಬೈಕ್‌ನಲ್ಲಿ ಹೊರಟಿದ್ದ ವೇಳೆ ಈ ಘಟನೆ ಸಂಭವಿಸಿದೆ. ದರ್ಶನ್ ಹಾಗೂ ಆಕಾಶ್, ಶಶಿಕುಮಾರ್ ಹನುಮನಮಟ್ಟಿ ಮೂರನೇ ವರ್ಷದ ಬಿಎಸ್ಸಿ ವ್ಯಾಸಂಗ ಮಾಡುತ್ತಿದ್ದರು.

# ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಕೃಷ್ಣಗೌಡ ಎಚ್.ಪಾಟೀಲ್ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಯುವ ಕಾಂಗ್ರೆಸ್ ವತಿಯಿಂದ ನಡೆದ ಕರ್ನಾಟಕ ರಾಜ್ಯ ಯುವ ಕಾಂಗ್ರೆಸ್ ಕಮಿಟಿಯ ಚುನಾವಣೆಯಲ್ಲಿ ಗದಗ ಜಿಲ್ಲೆಯಿಂದ ಜಿದ್ದಾ-ಜಿದ್ದಿನ ಪೈಪೋಟಿ ನಡೆಯಿತು. ಕೃಷ್ಣಗೌಡ ಎಚ್.ಪಾಟೀಲ್ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಆಯ್ಕೆಯಾದರೆ, ಅಕ್ಷಯ ಪಾಟೀಲ್ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ, ಉದಯ ವೀರನಗೌಡ್ರ ರಾಜ್ಯ ಕಾರ್ಯದರ್ಶಿಯಾಗಿ ಚುನಾಯಿತರಾಗಿದ್ದಾರೆ.



ಭರತರಡ್ಡಿ ಭೀಮರಡ್ಡಿಯವರ ಜಿಲ್ಲಾ ಉಪಾಧ್ಯಕ್ಷ, ಎಸ್.ಬಿ. ಗವಾರಿ ಜಿಲ್ಲಾ ಔಃಅ ಉಪಾಧ್ಯಕ್ಷರಾಗಿ, ರಾಘವೇಂದ್ರ ದೊಡ್ಡಮನಿ ಜಿಲ್ಲಾ ಖಅ ಉಪಾಧ್ಯಕ್ಷರಾಗಿ, ರವಿ ಮೆಟಗುಡ್ ಔಃಅ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ, ಬಸವರಾಜ ಪಾಟೀಲ್ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ, ಎಚ್.ವಿ. ರಿತ್ತಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ, ಮಿಲಿಂದ ಕಾಳೆ ಖಅ ಪ್ರಧಾನ ಕಾರ್ಯದರ್ಶಿಯಾಗಿ, ವಿಜಯಕುಮಾರ ಚಲವಾದಿ ಖಅ ಜಿಲ್ಲಾ ಕಾರ್ಯದರ್ಶಿಯಾಗಿ ಆಯ್ಕೆಯಾದರು.

ನರಗುಂದ ಅಸೆಂಬ್ಲಿಯಲ್ಲಿ ಈರಪ್ಪ ಚುಳಕಿ ತಾಲೂಕಾಧ್ಯಕ್ಷರಾಗಿ, ವಿನಾಯಕ ಎಸ್.ಗುಲಗಂಜಿ ಉಪಾಧ್ಯಕ್ಷರಾಗಿ, ನಾಗರಾಜ ಪೂಜಾರ ಖಖಿ ಉಪಾಧ್ಯಕ್ಷರಾಗಿ, ಅಶೋಕ ಎಚ್.ತಾಳದ ಖಅ ಉಪಾಧ್ಯಕ್ಷರಾಗಿ, ಪ್ರವೀಣ ಮಾಡಳ್ಳಿ ಪ್ರಧಾನ ಕಾರ್ಯದರ್ಶಿಗಳಾಗಿ ಚುನಾಯಿತರಾಗಿದ್ದಾರೆ.

ನರಗುಂದ ಬ್ಲಾಕ್‌ನಲ್ಲಿ ಸುನೀಲ್ ಕಳಸನ್ನವರ ಬ್ಲಾಕ್ ಅಧ್ಯಕ್ಷರು, ನಾಗರಾಜ ಹೂಲಿ ನರಗುಂದ ಬ್ಲಾಕ್ ಉಪಾಧ್ಯಕ್ಷರು, ರಿಯಾಜಹಮ್ಮದ್ ಚಿಕ್ಕೋಡಿ ನರಗುಂದ ಬ್ಲಾಕ್ ಉಪಾಧ್ಯಕ್ಷರು (Minority), ಹನುಮಂತ ರಾಮಣ್ಣವರ (ST) ನರಗುಂದ ಬ್ಲಾಕ್ ಪ್ರಧಾನ ಕಾರ್ಯದರ್ಶಿಯಾಗಿ ಚುನಾಯಿತರಾಗಿದ್ದಾರೆ.

ಹೊಳೆ ಆಲೂರ ಬ್ಲಾಕ್‌ನಲ್ಲಿ ಶಿವಪ್ಪ (ನಿಂಗಪ್ಪ) ಗುಂಜಾಳ ಅಧ್ಯಕ್ಷರು, ವಿಕ್ರಮ ಬರಡ್ಡಿ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಯುಥ್ ಕಾಂಗ್ರೆಸ್ ರಾಷ್ಟ್ರೀಯ ಕಾರ್ಯದರ್ಶಿ ವಿವೇಕ ಯಾವಗಲ್ ತಿಳಿಸಿದ್ದಾರೆ.

## ದೆಹಲಿಯಲ್ಲಿ ನಿಮ್ಮ ಶಾಸಕರನ್ನು ಎಣಿಸಿ : ಕಾಂಗ್ರೆಸ್‌ಗೆ ಪಂಜಾಬ್ ಸಿಎಂ

■ವಿಜಯಸಾಕ್ಷಿ ಸುದ್ದಿ, ಪಂಜಾಬ್

ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಮಂಗಳವಾರ ಕಾಂಗ್ರೆಸ್ ಅನ್ನು ತರಾಟೆಗೆ ತೆಗೆದುಕೊಂಡಿದ್ದು, ರಾಜ್ಯದಲ್ಲಿ ಸುಮಾರು 30 ಆಮ್ ಆದ್ಮಿ ಪಕ್ಷದ ನಾಯಕರು ತಮ್ಮ ಸಂಪರ್ಕದಲ್ಲಿದ್ದಾರೆ ಎಂಬ ಪಕ್ಷದ ನಾಯಕ ಪ್ರತಾಪ್ ಸಿಂಗ್ ಬಾಜ್ವಾ ಅವರ ಹೇಳಿಕೆಯನ್ನು ತಳ್ಳಿಹಾಕಿದ್ದಾರೆ. "ಕಳೆದ ಮೂರು ವರ್ಷಗಳಿಂದ ಬಾಜ್ವಾ ಅದೇ ಹೇಳಿಕೆಯನ್ನು ನೀಡುತ್ತಿದ್ದಾರೆ ಮತ್ತು ಅವರು ಅದನ್ನು ಹೇಳಿಕೊಳ್ಳುತ್ತಲೇ ಇರಬಹುದು" ಎಂದು ಅವರು ಹೇಳಿದ್ದಾರೆ. ದೆಹಲಿಯಲ್ಲಿ

"30-40 ಶಾಸಕರು ಕಾಂಗ್ರೆಸ್ ಪಕ್ಷಕ್ಕೆ ಹಾರಲಿದ್ದಾರೆ ಎಂದು ಅವರು ಹೇಳುತ್ತಲೇ ಇದ್ದಾರೆ ದೆಹಲಿಯಲ್ಲಿ ಅವರಿಗೆ ಎಷ್ಟು ಶಾಸಕರಿದ್ದಾರೆ ಎಂದು ಎಣಿಸಲು ನಾನು ಪ್ರತಾಪ್ ಸಿಂಗ್ ಬಾಜ್ವಾ ಅವರನ್ನು ಕೇಳುತ್ತೇನೆ" ಎಂದು ಅವರು ವ್ಯಂಗ್ಯವಾಡಿದ್ದಾರೆ.



ಫೆಬ್ರವರಿ 5 ರಂದು ನಡೆದ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಎಎಪಿ ಹೀನಾಯ ಸೋಲಿನ ಕೆಲವೇ ದಿನಗಳ ನಂತರ, ಕಾಂಗ್ರೆಸ್ ಪಕ್ಷವೂ ಎಎಪಿಯ 30 ಶಾಸಕರೊಂದಿಗೆ ಸಂಪರ್ಕದಲ್ಲಿ ಇದೆ ಎಂದು ಹೇಳಿತ್ತು. ಇದರ ನಂತರ ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರೊಂದಿಗೆ ಸಿಎಂ ಮಾನ್ ಅವರು ಸಭೆ ನಡೆಸಿದ್ದಾರೆ.

## ಭಿನ್ನಮತದ ವದಂತಿ: ಸಿಎಂ, ಶಾಸಕರೊಂದಿಗೆ ಕೇಜ್ರಿವಾಲ್ ಸಭೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪಕ್ಷದ ಪಂಜಾಬ್ ಘಟಕದಲ್ಲಿ ಭಿನ್ನಮತದ ವದಂತಿಗಳ ನಡುವೆ ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರು ಮಂಗಳವಾರ (ಫೆ.11) ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್, ಸಚಿವರು ಮತ್ತು ಶಾಸಕರೊಂದಿಗೆ ದೆಹಲಿಯ ಕಪುರ್ತಲಾ ಹೌಸ್‌ನಲ್ಲಿ ಸಭೆ ನಡೆಸಿದ್ದಾರೆ.

ಪಕ್ಷದ ನಾಯಕರ ಪ್ರಕಾರ, ಇತ್ತೀಚೆಗೆ ನಡೆದ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಎಎಪಿಯ ಸೋತಿರುವ ಕುರಿತು ಪರಾಮರ್ಶೆ ನಡೆಸಲು ಮತ್ತು 2027ರ ಪಂಜಾಬ್ ವಿಧಾನಸಭಾ ಚುನಾವಣೆಗೆ ಯೋಜನೆ ರೂಪಿಸುವ ಬಗ್ಗೆ ಚರ್ಚಿಸಲು ಸಭೆ ನಡೆಸಲಾಗಿದೆ. ಪಂಜಾಬ್ ಸಂಸದರಾದ ರಾಘವ್ ಚಡ್ಡಾ ಮತ್ತು ಸಂದೀಪ್ ಪಾಠಕ್ ಸೇರಿದಂತೆ ಹಿರಿಯ ನಾಯಕರು ಸಭೆಯಲ್ಲಿ ಭಾಗವಹಿಸಿದ್ದಾರೆ.

ಪಂಜಾಬ್‌ನ ಸಂಗ್ರೂರ್ ಶಾಸಕಿ ನರಿಂದರ್ ಕೌರ್ ಅವರು ಎಎಪಿಯೊಳಗಿನ ಆಂತರಿಕ ಭಿನ್ನಾಭಿಪ್ರಾಯದ ವರದಿಗಳನ್ನು ತಳ್ಳಿಹಾಕಿದ್ದಾರೆ. ಇಂದಿನದ್ದು ಪಕ್ಷದ ಸಾಮಾನ್ಯ ಸಭೆ ಎಂದಿದ್ದಾರೆ. "ನಾವು ದೆಹಲಿಯ ಜನಾದೇಶವನ್ನು ಸ್ವೀಕರಿಸುತ್ತೇವೆ ಮತ್ತು ಬಲವಾದ ವಿರೋಧ ಪಕ್ಷವಾಗಿ ನಮ್ಮ ಪಾತ್ರ



ನಿರ್ವಹಿಸುತ್ತೇವೆ. ಪಂಜಾಬ್ ಮತ್ತು ದೆಹಲಿಯಲ್ಲಿ ಇಂತಹ ಸಭೆಗಳು ಈ ಹಿಂದೆಯೂ ನಡೆದಿವೆ" ಎಂದು ಹೇಳಿದ್ದಾರೆ. ಎಎಪಿಯಲ್ಲಿ ಭಿನ್ನಾಭಿಪ್ರಾಯವಿದೆ ಎಂಬ ಕಾಂಗ್ರೆಸ್‌ನ ಹೇಳಿಕೆಯನ್ನು ಕೌರ್ ವಿರೋಧಿಸಿದ್ದಾರೆ. "ಇಷ್ಟು ವರ್ಷಗಳ ಕಾಲ ಆಡಳಿತ ನಡೆಸಿದ ತಮ್ಮ ಪಕ್ಷಕ್ಕೆ ದೆಹಲಿಯಲ್ಲಿ ಶೂನ್ಯ ಸ್ಥಾನಗಳು ಏಕೆ ಬಂದವು ಎಂಬುವುದನ್ನು ಕಾಂಗ್ರೆಸ್ ಪರಾಮರ್ಶಿಸಲಿ. ನಮ್ಮ ಪಕ್ಷವನ್ನು ನಾವು ನೋಡಿಕೊಳ್ಳುತ್ತೇವೆ" ಎಂದಿದ್ದಾರೆ.

ಒಂದು ದಶಕದ ಕಾಲ ದೆಹಲಿಯನ್ನು ಆಳಿದ್ದ ಎಎಪಿ, ಫೆಬ್ರವರಿ 8ರಂದು ಪ್ರಕಟಗೊಂಡ ಚುನಾವಣಾ ಫಲಿತಾಂಶದಲ್ಲಿ 70 ವಿಧಾನಸಭಾ ಸ್ಥಾನಗಳಲ್ಲಿ ಕೇವಲ 22 ಮಾತ್ರ ಗೆಲ್ಲುವ ಮೂಲಕ ಭಾರೀ ಹಿನ್ನಡೆ ಅನುಭವಿಸಿದೆ. ಬಿಜೆಪಿಯ ಗೆಲುವು ರಾಜಧಾನಿಯಲ್ಲಿ ಎಎಪಿಯ ದಶಕದ ಆಡಳಿತವನ್ನು ಕೊನೆಗೊಳಿಸಿದೆ. ಪಕ್ಷದ ಭವಿಷ್ಯದ ಬಗ್ಗೆ ಕಳವಳವನ್ನು ಹುಟ್ಟುಹಾಕಿದೆ.

ದೆಹಲಿಯಲ್ಲಿ ಎಎಪಿಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರೇ ಸೋಲನುಭವಿಸಿದ್ದಾರೆ. ಹಾಗಾಗಿ, ಅವರು ಪಂಜಾಬ್ ಮೂಲಕ ಮುಂದಿನ ರಾಜಕೀಯ ಅಧಿಕಾರ ಹಿಡಿಯುವ ಸಾಧ್ಯತೆ ಇದೆ. ಖಾಲಿ ಇರುವ ಲುಧಿಯಾನ ವಿಧಾನಸಭಾ ಕ್ಷೇತ್ರದಿಂದ ಅವರು ಚುನಾವಣೆಗೆ ಸ್ಪರ್ಧಿಸುವ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ಆದರೆ, ಎಎಪಿ ಸಂಸದ ಮಲ್ವಿಂದರ್ ಸಿಂಗ್ ಕಾಂಗ್ ಅವರು ಈ ವರದಿಗಳನ್ನು ತಳ್ಳಿ ಹಾಕಿದ್ದಾರೆ. ಇಂದಿನ ಸಭೆಯನ್ನು ಪಕ್ಷದ ನಿಯಮಿತ ಕಾರ್ಯತಂತ್ರದ ಭಾಗ ಎಂದಿದ್ದಾರೆ.

# ಆಯಕಟ್ಟಿನ ಸ್ಥಳಗಳಲ್ಲಿ ನಾಕಾಬಂದಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಅವರ ನಿರ್ದೇಶನದಂತೆ ಜಿಲ್ಲೆಯಾದ್ಯಂತ ಶಾಂತಿ ಮತ್ತು ಸುವ್ಯವಸ್ಥೆ ಜೊತೆಗೆ ಕಳ್ಳತನ ಪ್ರಕರಣ ತಡೆಗೆ ಬಿಗಿ ಪೊಲೀಸ್ ವ್ಯವಸ್ಥೆ ಜಾರಿ ಮಾಡಿ ಆಯಕಟ್ಟಿನ ಸ್ಥಳಗಳಲ್ಲಿ ನಾಕಾಬಂದಿ ಹಾಕಲಾಗಿದೆ ಎಂದು ಗದಗ ಡಿಎಸ್‌ಪಿ ಜಡ್.ಎಚ್. ಇನಾಮದಾರ ಹೇಳಿದರು.

ಅವರು ಶನಿವಾರ (ತಡರಾತ್ರಿ) ಶಿರಹಟ್ಟಿ ಪಟ್ಟಣಕ್ಕೆ ಭೇಟಿ ನೀಡಿ ಪೊಲೀಸ್ ವ್ಯವಸ್ಥೆಯ ಪರಿಶೀಲನೆ ನಡೆಸಿ ಮಾತನಾಡಿದರು. ನಾಕಾಬಂದಿಗಳಲ್ಲಿ ಸಂಶಯಾಸ್ಪದವಾಗಿ



ಸಂಚರಿಸುವ ವಾಹನಗಳನ್ನು ತಪಾಸಣೆ ಮಾಡಲಾಗುವುದು. ಅನಾವಶ್ಯಕವಾಗಿ ಸಂಚರಿಸುವವರ ಮೇಲೂ ನಿಗಾ ವಹಿಸಲಾಗುವುದು. ಸಾರ್ವಜನಿಕರು ರಾತ್ರಿ ಸಮಯದಲ್ಲಿ ಅನಾವಶ್ಯಕವಾಗಿ ಹೊರಗಡೆ ಸಂಚರಿಸಬಾರದು. ಸರಕಾರದ ನಿಯಮಾನುಸಾರ ನಿಗದಿತ ಸಮಯಕ್ಕೆ ಅಂಗಡಿಗಳನ್ನು ಬಂದ್ ಮಾಡಬೇಕು. ಪೊಲೀಸ್ ಬೀಟ್‌ನಲ್ಲಿ ಹಲವಾರು ಸುಧಾರಿತ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದ್ದು, ಅಧಿಕಾರಿಗಳು ಸಹ ರಾತ್ರಿ ಸಮಯದಲ್ಲಿ ಪರಿಶೀಲನೆ ನಡೆಸುತ್ತಿದ್ದಾರೆ. ಸಾರ್ವಜನಿಕರು ಎಂದಿನಂತೆ ಇಲಾಖೆಗೆ ಸಹಕಾರ ನೀಡಬೇಕೆಂದು ಹೇಳಿದರು.

ಶಿರಹಟ್ಟಿ ಸಿಪಿಐ ನಾಗರಾಜ ಮಾಢಳ್ಳಿ ಮಾತನಾಡಿ, ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳು ಸೇರಿದಂತೆ ಠಾಣಾ ವ್ಯಾಪ್ತಿಯ ಎಲ್ಲ ಗ್ರಾಮೀಣ ಪ್ರದೇಶಗಳಲ್ಲಿ ಶಾಂತಿ-ಸುವ್ಯವಸ್ಥೆ ಕಾಪಾಡುವುದಕ್ಕೆ ಅಗತ್ಯ ಕ್ರಮ ಕೈಕೊಳ್ಳಲಾಗಿದ್ದು, ಕಳ್ಳತನ ಪ್ರಕರಣ ತಡೆಗೆ ರಾತ್ರಿ ವೇಳೆಯಲ್ಲಿ ಕರ್ತವ್ಯ ನಿರ್ವಹಿಸಲು ಅಗತ್ಯ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದರು.

ಪಿಎಸ್‌ಐ ಚನ್ನಯ್ಯ ದೇವೂರ ಮತ್ತು ಪೊಲೀಸ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ನೂತನ ಎಎಪಿ ಶಾಸಕ ಅಮಾನತುಲ್ಲಾ ಖಾನ್ ಮನೆ ಮೇಲೆ ಪೊಲೀಸ್ ದಾಳಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಓಖ್ಲಾ ಕ್ಷೇತ್ರದಿಂದ ಇತ್ತೀಚೆಗೆ ಮರು ಆಯ್ಕೆಯಾದ ಆಮ್ ಆದ್ಮಿ ಪಕ್ಷದ (ಎಎಪಿ) ಶಾಸಕ ಅಮಾನತುಲ್ಲಾ ಖಾನ್ ಅವರು ಗೆಲುವಿನ ಕೆಲವೇ ದಿನಗಳ ನಂತರ ಕಾನೂನು ತೊಡಕನ್ನು ಎದುರಿಸುತ್ತಿದ್ದಾರೆ. ಬುಧವಾರ ಬೆಳಿಗ್ಗೆ ಜಾಮಿಯಾ ನಗರದಲ್ಲಿ ಪೊಲೀಸ್ ತಂಡದ ಮೇಲೆ ನಡೆದ ದಾಳಿಗೆ ಸಂಬಂಧಿಸಿದಂತೆ ಅವರನ್ನು ಬಂಧಿಸಲು ದೆಹಲಿ ಪೊಲೀಸರು ಹಲವು ದಾಳಿಗಳನ್ನು ನಡೆಸಿದರು.

ಜಾಮಿಯಾ ನಗರ ಮತ್ತು ಆಗ್ನೇಯ ಜಿಲ್ಲಾ ಪೊಲೀಸ್ ಠಾಣೆಗಳ ತಂಡಗಳು ಮತ್ತು ದೆಹಲಿ ಪೊಲೀಸರ ಅಪರಾಧ ವಿಭಾಗದ ಜಂಟಿ ಕಾರ್ಯಾಚರಣೆಯ ಭಾಗವಾಗಿ ಈ ದಾಳಿಗಳನ್ನು ನಡೆಸಲಾಯಿತು.

ಮಂಗಳವಾರ ಖಾನ್ ವಿರುದ್ಧ ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ನ ವಿವಿಧ ವಿಭಾಗಗಳ ಅಡಿಯಲ್ಲಿ 221/121(1)/132/191(2)/190/263(ಬಿ)/351(3)/111 ಸೇರಿದಂತೆ ವಿವಿಧ ವಿಭಾಗಗಳ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ ನಂತರ ಈ ಕಾರ್ಯಾಚರಣೆ ನಡೆಸಲಾಯಿತು.

ಪೊಲೀಸರ ಪ್ರಕಾರ, ಕೊಲೆ ಯತ್ನ ಪ್ರಕರಣದ ಆರೋಪಿ ಶಬಾಜ್ ಖಾನ್ ಬಂಧನದಿಂದ ತಪ್ಪಿಸಿಕೊಳ್ಳಲು ಅಮಾನತುಲ್ಲಾ ಖಾನ್ ಸಹಾಯ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಖಾನ್ ಬೆಂಬಲಿಗರು ಮತ್ತು ಪೊಲೀಸರ ನಡುವೆ ಘರ್ಷಣೆ ನಡೆದು ಶಬಾಜ್ ಸ್ಥಳದಿಂದ ಪರಾರಿಯಾಗಲು ಅವಕಾಶ ಮಾಡಿಕೊಟ್ಟರು ಎಂದು ವರದಿಗಳು ಸೂಚಿಸುತ್ತವೆ.

# ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿ ವರ್ಷ ಎಪ್ರಿಲ್ 05 ರಂದು ಡಾ. ಬಾಬು ಜಗಜೀವನರಾಮರವರ ಹಾಗೂ ಎಪ್ರಿಲ್ 14ರಂದು ಡಾ. ಬಿ ಆರ್ ಅಂಬೇಡ್ಕರ್ ಅವರ ಜನ್ಮ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಸರ್ಕಾರದ ವತಿಯಿಂದ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜನಾಂಗದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ ಶ್ರಮಿಸಿ, ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ 2025-26ನೇ ಸಾಲಿನಲ್ಲಿ ಡಾ. ಬಾಬು ಜಗಜೀವನರಾಮ್ ಹಾಗೂ ಡಾ. ಬಿ ಆರ್ ಅಂಬೇಡ್ಕರ್ ಪ್ರಶಸ್ತಿಗಳನ್ನು ನೀಡಿ ಗೌರವಿಸಲು ಉದ್ದೇಶಿಸಲಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯದವರು ಮತ್ತು ಸಾರ್ವಜನಿಕರು ಡಾ. ಬಾಬು ಜಗಜೀವನರಾಮ್ ಹಾಗೂ ಡಾ. ಬಿ ಆರ್ ಅಂಬೇಡ್ಕರ್‌ರವರ ಪ್ರಶಸ್ತಿಗಳಿಗೆ ಅರ್ಜಿ ಸಲ್ಲಿಸಲು ಕೋರಿದ್ದು, ಭರ್ತಿ ಮಾಡಿದ ಅರ್ಜಿಗಳನ್ನು ಉಪ ನಿರ್ದೇಶಕರ ಕಚೇರಿ ಸಮಾಜ ಕಲ್ಯಾಣ ಇಲಾಖೆ ಗದಗ, ಇಲ್ಲಿ ಫೆ.25 ರೊಳಗೆ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ ಸಮಾಜ ಕಲ್ಯಾಣ ಇಲಾಖೆ ಗದಗ ಇಲ್ಲಿ ಸಂಪರ್ಕಿಸಲು ಕೋರಿದೆ.

### ಭಾರತೀಯ ಕಿಸಾನ ಸಂಘದ ಕಾರ್ಯಕ್ರಮದಲ್ಲಿ ಸಂಘದ ಉತ್ತರ ಪ್ರಾಂತ್ಯ ಪ್ರಧಾನ ಕಾರ್ಯದರ್ಶಿ ಮಾಧವ ಹೆಗಡೆ

# ಸಾವಯವ ಕೃಷಿಯೊಂದಿಗೆ ಮಣ್ಣನ್ನು ರಕ್ಷಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ನಮ್ಮ ಮುಂದಿನ ಪೀಳಿಗೆಯ ಆರೋಗ್ಯ ರಕ್ಷಣೆಗಾಗಿ ಕೃಷಿಕರು ಸಾವಯವ ಕೃಷಿಯನ್ನು ಅಳವಡಿಸಿಕೊಂಡು ಮಣ್ಣನ್ನು ರಕ್ಷಣೆ ಮಾಡುವುದು ಅಗತ್ಯವಾಗಿದೆ ಎಂದು ಭಾರತೀಯ ಕಿಸಾನ್ ಸಂಘದ ಉತ್ತರ ಪ್ರಾಂತ್ಯ ಪ್ರಧಾನ ಕಾರ್ಯದರ್ಶಿ ಮಾಧವ ಹೆಗಡೆ ಅಭಿಪ್ರಾಯಪಟ್ಟರು.

ಇಲ್ಲಿಯ ಪ್ರವಾಸಿ ಮಂದಿರದ ಸಭಾ ಭವನದಲ್ಲಿ ಭಾರತೀಯ ಕಿಸಾನ ಸಂಘದ ಗದಗ ತಾಲೂಕು ಘಟಕವು ಹಮ್ಮಿಕೊಂಡಿದ್ದ ಸಾವಯವ ಕೃಷಿ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬೆಳೆಗೆ ರಾಸಾಯನಿಕ ಗೊಬ್ಬಗಳನ್ನು ಹಾಕುವುದರಿಂದ ವಿಷದ ಆಹಾರವನ್ನು ಕೊಡುತ್ತಿದ್ದೇವೆ. ಆದ್ದರಿಂದ ಗೋ ಆಧಾರಿತ ಮತ್ತು ಎರೆ ಹುಳು ಆಧಾರಿತ ಸಾವಯವ ಕೃಷಿಯನ್ನು ಪ್ರತಿಯೊಬ್ಬ ರೈತರು ಅಳವಡಿಸಿಕೊಳ್ಳುವುದು ಅವಶ್ಯವಾಗಿದೆ. ದತ್ತುಪಾಧ್ಯ ತಿಂಗಡೆಯವರು ಸ್ಥಾಪನೆ ಮಾಡಿ ಬೆಳೆಸಿದ ಭಾರತೀಯ ಕಿಸಾನ್ ಸಂಘವು ಕಳೆದ 75 ವರ್ಷಗಳಿಂದ ಕೃಷಿಕರ ಅಭಿವೃದ್ಧಿಗಾಗಿ ಹೋರಾಡುತ್ತಾ ಬಂದಿದೆ ಎಂದರು.

ರಾಜ್ಯ ಕೃಷಿ ಸಾಧಕ ಪ್ರಶಸ್ತಿ ವಿಜೇತೆ ಡಾವಣಗೇರಿಯ ಕೆ.ಜಿ. ವಸಂತಮ್ಮ ಸನ್ಮಾನ ಸ್ವೀಕರಿಸಿ ಮಾತನಾಡಿ,



ಮನುಷ್ಯ ಸತ್ತರೆ ಮಣ್ಣಿಗೆ, ಮಣ್ಣೇ ಸತ್ತರೆ ಎಲ್ಲಿಗೆ? ಭೂ ತಾಯಿಗೆ ವಿಷವನ್ನು ಉಣಿಸದೇ ಗೋ ಆಧಾರಿತ ಕೃಷಿಯನ್ನು ಮಾಡಿ ಎಂದು ಕರೆ ನೀಡಿದರು.

ಸಾವಯವ ಕೃಷಿ ಪ್ರಶಸ್ತಿ ಪುರಸ್ಕೃತ ಬಿಂಕದಕಟ್ಟಿಯ ದೇವರೆಡ್ಡಿ ಅಗಸನಕೊಪ್ಪ ಸನ್ಮಾನ ಸ್ವೀಕರಿಸಿ ಮಾತನಾಡಿ, ಸ್ವಾವಲಂಬಿ ರೈತ, ಸಂಪನ್ನ ಗ್ರಾಮ, ಸಮರ್ಥ ಭಾರತ ಎಂಬ ಧ್ಯೇಯೋದ್ದೇಶಗಳನ್ನು ಇಟ್ಟುಕೊಂಡು ಸ್ಥಾಪನೆ ಮಾಡಿದ ದತ್ತುಪಾಧ್ಯ ಕಿಂಗಡೆ ಗ್ರಾಮದಲ್ಲಿಯ ರೈತರನ್ನು ಸ್ವಾವಲಂಬಿಗಳನ್ನಾಗಿ ಮಾಡಲು ತಮ್ಮ ಜೀವನವನ್ನೇ ಮುಡುಪಾಗಿಟ್ಟಿದ್ದರು ಎಂದರು.

ಸಾವಯವ ಕೃಷಿಯಲ್ಲಿ ಸಾಧನೆ ಮಾಡಿದ ಡಾವಣಗೇರಿಯ ಕೆ.ಜಿ ವಸಂತಮ್ಮ, ದೇವರೆಡ್ಡಿ ಅಗಸನಕೊಪ್ಪ, ಸಂಗನಾಳ ಗ್ರಾಮದ ರುದ್ರಗೌಡ ಲಿಂಗನಗೌಡರ, ವೆಂಕಟೇಶ ದೊಂಗಡೆ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮಕ್ಕೂ ಮೊದಲು ವಿಧಿ ವಿಧಾನಗಳೊಂದಿಗೆ ಗೋಪೂಜೆ ಹಾಗೂ ಭಾರತ ಮಾತೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಎಂ.ಜಿ. ನೀಲಪ್ಪಗೌಡರ ಅಧ್ಯಕ್ಷತೆ ವಹಿಸಿದ್ದರು. ಮಂಜುನಾಥ ಜಲರೆಡ್ಡಿ, ಟಾಕಪ್ಪ ಸಾತಪುತೆ, ಚಂದ್ರು ದಂಡಿನ, ಬಸವರಾಜ ಅಸುಂಡಿ, ಸೋಮಶೇಖರ ಹಿರೇಮಠ, ರಾಮನಗೌಡ ಪಾಟೀಲ, ವೆಂಕಟೇಶ ಸೂರಣಗಿ, ಈರಣ್ಣ ಚಿನ್ನೂರ, ಕುಬೇರಪ್ಪ ಚನ್ನಬಸನಗೌಡ ಪಾಟೀಲ, ಭೀಮಪ್ಪ ಅವಾರಿ, ಕುಮಾರ ಹಲವಾಗಲಿ, ಭಾರತಿ ಹಂಚಿನಾಳ, ಭರಮಪ್ಪ ನಾಗನೂರು, ದೇವರಡ್ಡಿ ಬಂಡಿ, ರಮೇಶ ರಾಮೇನಹಳ್ಳಿ, ಮಂಜುನಾಥ ಹುಬ್ಬಳ್ಳಿ, ರಾಜಸೇಖರ ಹಿರೇಮಠ, ಬಸಣ್ಣ ಮೂಲಿಮನಿ, ಬಸಣ್ಣ ದೊಡಗಣ್ಣವರ, ಶಕುಂತಲಾ ಮರೇಗೌಡರ, ರೈತ ಆಧಾರಿತ ಎಫ್‌ಪಿಓ ಅಧ್ಯಕ್ಷ ಫಕ್ಕೀರಯ್ಯ ಹಿರೇಮಠ, ಶ್ರೀಧರ ಪಾಟೀಲ, ನೆಟ್‌ಸರ್ಫ್‌ನ ವ್ಯವಸ್ಥಾಪಕ ಅತಿಷ್ ಪಾಟೀಲ, ಹನುಮಗೌಡ ಬ್ಯಾಲಾಳ ಉಪಸ್ಥಿತರಿದ್ದರು.

ಈ ಸಂಘವು ಪಕ್ಷ ಭೇದ ಮರೆತು ಗೋಮಾತೆಯನ್ನು ರಕ್ಷಣೆ ಮಾಡುವುದರಿಂದ ದೇಶ ಸೇವೆಯಲ್ಲಿ ತೊಡಗಿಕೊಂಡಿದೆ. 1961ರಲ್ಲಿ ದೇಶಕ್ಕೆ ಆಹಾರ ಕೊರತೆ ಎದುರಾದಾಗ ಈ ದೇಶದ ಪ್ರಧಾನಿಯಾಗಿದ್ದ ಲಾಲಬಹದ್ದೂರ ಶಾಸ್ತ್ರಿಗಳು ವಾರದಲ್ಲಿ ಒಂದು ದಿನ ಉಪವಾಸ ಮಾಡಲು ಕರೆ ನೀಡಿದ್ದರು. ರೈತರು ಸ್ಪಂದಿಸಿ ಇಂದಿಗೂ ಸಹ ಉಪವಾಸ ಮಾಡಿ ದೇವರ ಕೃಪೆಗೆ ಪಾತ್ರರಾಗಿದ್ದಾರೆ. ಈ ಹಿಂದೆ 40 ರಾಷ್ಟ್ರಗಳು ಸೇರಿ ನಮ್ಮ ದೇಶವನ್ನು ಹಾಳು ಮಾಡಲು ಉಪಾಯ ಮಾಡಿದ್ದರು. ಆದರೆ ಇಂದು ಅದೇ 40 ರಾಷ್ಟ್ರಗಳು ಕುಂಭ ಮೇಳದಲ್ಲಿ ಪಾಲ್ಗೊಂಡು ಶಸ್ತ್ರ ಮತ್ತು ಶಾಸ್ತ್ರ ವಿದ್ಯೆಯನ್ನು ಕಲಿತ ನಾಗಾ ಸಾಧುಗಳ ಆಶೀರ್ವಾದವನ್ನು ಪಡೆಯಲು ಆಗಮಿಸುತ್ತಿರುವುದು ನಮ್ಮ ದೇಶದ ಶಕ್ತಿಯಾಗಿದೆ ಎಂದು ಮಾಧವ ಹೆಗಡೆ ತಿಳಿಸಿದರು.




ಮುಳಗುಂದ ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ 166ನೇ ಜಾತ್ರಾ ಮಹೋತ್ಸವದ ಕಡುಬಿನ ಕಾಳಗವನ್ನು ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮಿಗಳಿಂದ ನೆರವೇರಿತು. ಸಾವಿರಾರು ಭಕ್ತರು ಸಡಗರ ಸಂಭ್ರಮದಿಂದ ಪಾಲ್ಗೊಂಡಿದ್ದರು.



ಗದಗ : ಜಿಲ್ಲೆಯ ನರಗುಂದ ತಾಲೂಕಿನ ಸುರಕೋಡ್ ಗ್ರಾಮದ ವಸಂತ ದೇವಪ್ಪ ಚವಡಿ ಹಾಗೂ ಯಲ್ಲಪ್ಪ ರಾಮಣ್ಣ ಶಿರಸಂಗಿ ಇವರು 23 ವರ್ಷಗಳ ಕಾಲ ಭಾರತೀಯ ಸೇನೆಯಲ್ಲಿ ಸೇವೆಯನ್ನು ಸಲ್ಲಿಸಿ ನಿವೃತ್ತರಾಗಿ ಗ್ರಾಮಕ್ಕೆ ಆಗಮಿಸಿದ ಸಂದರ್ಭದಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಯುವ ಮಹಾಸಭಾದ ಗದಗ ಜಿಲ್ಲೆಯ ಯುವ ಘಟಕದ ಅಧ್ಯಕ್ಷ ಅನಿಲಕುಮಾರ ಸಿದ್ದಮ್ಮನಹಳ್ಳಿ, ನಿವೃತ್ತ ಸೈನಿಕರಾದ ರಮೇಶ ವಟ್ಟಿ, ವಾಯ್.ಪಿ. ಅಡ್ನೂರ ಸೋಮಣ್ಣ ಕರ್ಲವಾಡ ಶ್ರೀಕಾಂತ ಪೂಜಾರ ಮುಂತಾದವರು ಸನ್ಮಾನಿಸಿ ಅಭಿನಂದಿಸಿದರು.

# ಲಿಂಗಾಯತ ನೌಕರರ ಸಂಘದ ಕ್ಯಾಲೆಂಡರ್ ಬಿಡುಗಡೆ




**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ಲಿಂಗಾಯತ ನೌಕರರ ಸಂಘದ ಗದಗ ಘಟಕದ ವತಿಯಿಂದ 2025ರ ಕ್ಯಾಲೆಂಡರ್‌ನ್ನು ಬಿಡುಗಡೆ ಮಾಡಲಾಯಿತು. ಸಮಾರಂಭದ ಅಧ್ಯಕ್ಷತೆಯನ್ನು ಸಿವ್ಹಿಲ್ ವಿಭಾಗದ ಮುಖ್ಯಸ್ಥರಾದ ಡಾ. ಕೆ.ಲೋಕೇಶ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಮೆಕ್ಯಾನಿಕಲ್ ವಿಭಾಗದ ಡಾ. ದಯಾನಂದ ಗೌಡರ, ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ರಮೇಶ ಬಡಿಗೇರ, ಪ್ರೊ. ನಿಂಗಪ್ಪ ಪೂಜಾರ, ಪ್ರೊ. ಪ್ರಸನ್ನ ನಾಡಗೌಡ, ಪ್ರೊ. ನೀತಾ ಮುದರೆಡ್ಡಿ, ಡಾ. ಅಶ್ವಿನಿ ಅರಳಿ, ಪ್ರೊ. ಸೌಮ್ಯ ಪಾಟೀಲ, ಪ್ರೊ. ಪ್ರವೀಣ ಜ್ಯೋತಿ, ಪ್ರೊ. ಸುನೀಲ್ ಬೇಗಮ್‌ಪುರ, ನಿಂಗಪ್ಪ ಅಣ್ಣಿಗೇರಿ, ಶರಣಪ್ಪ ಗೋಡಿ ಸೇರಿದಂತೆ ವಿವಿಧ ವಿಭಾಗದ ಮುಖ್ಯಸ್ಥರು ಹಾಗೂ ಅಧ್ಯಾಪಕರು ಹಾಜರಿದ್ದರು.

ಗದಗ ಜಿಲ್ಲಾ ಲಿಂಗಾಯತ ನೌಕರರ ಸಂಘದ ಅಧ್ಯಕ್ಷರಾದ ಡಾ. ಸಂಗಪ್ಪ ಗಾಣಿಗೇರ ಲಿಂಗಾಯತ ನೌಕರರ ಸಂಘದ ಬಗ್ಗೆ ವಿವರಿಸಿದರು. ಸಂಘದ ಕಾರ್ಯದರ್ಶಿಗಳಾದ ಡಾ. ಬಸನಗೌಡ ಪಾಟೀಲ ಇದ್ದರು.

# ಭಕ್ತಿಯ ಅಲೆಯಲ್ಲಿ ತೇಲಿಸಿದ ರಾಜಶ್ರೀ ಗಾಯನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆಯುತ್ತಿರುವ 115ನೇ ವರ್ಷದ ಶ್ರೀ ಗುರು ಪ್ರತಿಪದೆ ಉತ್ಸವದಲ್ಲಿ ಸೋಮವಾರ ಸಂಜೆ ಪಟ್ಟಣದ ಗಾಯಕಿ ರಾಜಶ್ರೀ ಕುಲಕರ್ಣಿಯವರು ನೀಡಿದ ಸಂಗೀತ ಕಾರ್ಯಕ್ರಮ ಭಕ್ತರನ್ನು ಭಕ್ತಿಯ ಅಲೆಯಲ್ಲಿ ತೇಲಿಸಿತು.




ಆಕಾಶವಾಣಿ-ದೂರದರ್ಶನ ಕಲಾವಿದ ಉಮೇಶ ಪಾಟೀಲ ನೀಡಿದ ತಬಲಾ ಸಾಥ್ ಮತ್ತು ಗದಗನ ಸಂಕೇಶ ನೀಡಿದ ಹಾರ್ಮೋನಿಯಂ ಸಾಥ್ ಕಾರ್ಯಕ್ರಮದ ಮೆರಗನ್ನು ಹೆಚ್ಚಿಸಿದ್ದವು.

ಈ ಸಂದರ್ಭದಲ್ಲಿ ಮಾತನಾಡಿದ ಎಸ್.ಎಚ್. ಜೋಷಿ, ಸಂಗೀತಕ್ಕೆ ಎಲ್ಲರೂ ತಲೆದೂಗುವಂತೆ ಮಾಡುವ ಶಕ್ತಿಯಿದೆ. ಎಂಥವರನ್ನೂ ಮರಳು ಮಾಡುವ ಶಕ್ತಿ ಸಂಗೀತಕ್ಕಿದೆ. ಇದರಿಂದ ಮನಸ್ಸಿಗೆ ಆನಂದವಾಗುವದರ ಜೊತೆಗೆ, ಅನೇಕ ರೋಗಗಳನ್ನು ಗುಣಪಡಿಸುವ ಶಕ್ತಿ ಸಂಗೀತಕ್ಕಿದೆ ಎಂಬುದು ಅದೆಷ್ಟೋ ಸಾರೆ ಸಾಬೀತಾಗಿದೆ. ಹಿಂದೂಸ್ಥಾನಿ ಸಂಗೀತದಲ್ಲಿ ಸಾಧನೆ ಮಾಡಿರುವ ಕಲಾವಿದೆಯೊಬ್ಬರು ರಾಜಶ್ರೀ ಕುಲಕರ್ಣಿಯವರ ರೂಪದಲ್ಲಿ ನಮ್ಮ ನರೇಗಲ್ಲ ಪಟ್ಟಣದಲ್ಲಿರುವುದು ಅತ್ಯಂತ ಸಂತಸದ ಸಂಗತಿ. ಇವರಿಗೆ ಇನ್ನೂ ಹೆಚ್ಚಿನ ಪ್ರೋತ್ಸಾಹ ದೊರೆತರೆ ಖಂಡಿತ ಇವರು ಸಂಗೀತ ಕ್ಷೇತ್ರದಲ್ಲಿ ಒಬ್ಬ ಶ್ರೇಷ್ಠ ಗಾಯಕಿಯಾಗುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದರು.

ಶೋಭಾ ಸೂರಭಟ್ಟನವರ ಗಾಯಕಿ ರಾಜಶ್ರೀಯವರನ್ನು ದೇವಸ್ಥಾನದ ಪರವಾಗಿ ಸನ್ಮಾನಿಸಿದರು. ದೇವಸ್ಥಾನದ ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿ, ಎಸ್.ಎಚ್. ಕುಲಕರ್ಣಿ, ಆನಂದ ಕುಲಕರ್ಣಿ, ಜ್ಯೋತಿ ನಾಡಿಗೇರ, ಶೋಭಾ ಕುಲಕರ್ಣಿ, ನಿಖಿತಾ ಗ್ರಾಮಪುರೋಹಿತ, ಅನಿತಾ ಗ್ರಾಮಪುರೋಹಿತ, ಭಾರತಿಬಾಯಿ ಗ್ರಾಮಪುರೋಹಿತ, ಸನ್ಮತಿ ಸದರಜೋಷಿ, ಪದ್ಮಾ ಕುಲಕರ್ಣಿ, ಗೀತಾಬಾಯಿ ಕೊಂಡಿ, ರೇಣುಕಾ ಗ್ರಾಮಪುರೋಹಿತ, ವಿದ್ಯಾ ಗ್ರಾಮಪುರೋಹಿತ, ಪ್ರತೀಕ್ಷಾ ಕುಲಕರ್ಣಿ, ಪಲ್ಲವಿ ಗ್ರಾಮಪುರೋಹಿತ, ಶ್ರೇಯಾ ನಾಡಿಗೇರ ಇನ್ನೂ ಮುಂತಾದವರು ಉಪಸ್ಥಿರಿದ್ದು ಸಂಗೀತದ ಸವಿಯನ್ನು ಸವಿದರು. ಸೀಮಾ ಕೊಂಡಿ ನಿರೂಪಿಸಿದರು. ರಘುನಾಥ ಕೊಂಡಿ ಸ್ವಾಗತಿಸಿ, ವಂದಿಸಿದರು.

### ವಿಡಿಎಸ್ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ಚಿಣ್ಣರ ಹಬ್ಬ, ಸರಸ್ವತೀ ಪೂಜೆ

# ವಿದ್ಯಾದಾನ ಸಮಿತಿಯ ಕೀರ್ತಿ ಹಿರಿದು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶತಮಾನ ಪೂರೈಸಿದ ಹಾಗೂ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶಿಕ್ಷಣ ಸಂಸ್ಥೆಯಾದ ವಿದ್ಯಾದಾನ ಸಮಿತಿಯ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ಚಿಣ್ಣರ ಹಬ್ಬ ಹಾಗೂ ಸರಸ್ವತೀ ಪೂಜಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ನಿರ್ದೇಶಕ ಯೋಗೀಶ ಎ, ಶುದ್ಧಗಂಗಾ ಮೇಲ್ವಿಚಾರಕರಾದ ಧರ್ಮರಾಜ, ಸಿಇಓ ಪಿ.ಎಚ್. ಕಡಿವಾಲ, ರವಿ ಹೆಬ್ಬಳ್ಳಿ ಹಾಗೂ ಡಾ. ಗಂಗೂಬಾಯಿ ಪವಾರ ಸರಸ್ವತೀ ಮಾತೆಯ ಭಾವಚಿತ್ರಕ್ಕೆ ಹೂ ಮಾಲೆ ಅರ್ಪಿಸಿ ಪೂಜೆ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.



ಶ್ರೀಕ್ಷೇತ್ರ ಧರ್ಮಸ್ಥಳದ ಗ್ರಾಮಾಭಿವೃದ್ಧಿ ಯೋಜನೆಯ ಗದಗ ಜಿಲ್ಲೆಯ ನಿರ್ದೇಶಕ ಯೋಗೀಶ ಎ ಮಾತನಾಡಿ, ವಿದ್ಯಾದಾನ ಸಮಿತಿಯು ಉತ್ತರ ಕರ್ನಾಟಕದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿದೆ. ಈ ಸಂಸ್ಥೆಯು ತನ್ನದೇ ಆದ ಲಕ್ಷಾಂತರ ಪ್ರತಿಭಾವಂತ ವಿದ್ಯಾರ್ಥಿಗಳನ್ನು ನಾನಾ ಕ್ಷೇತ್ರಗಳಲ್ಲಿ ಉನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸಲು ವಿದ್ಯೆಯನ್ನು ಧಾರೆಯೆರೆದ ವಿದ್ಯಾ ಸಂಸ್ಥೆಯಾಗಿದೆ. ಇಂತಹ ಐತಿಹಾಸಿಕ ಪರಂಪರೆಯುಳ್ಳ ಶಿಕ್ಷಣ ಸಂಸ್ಥೆಯ ಕಾರ್ಯಕ್ರಮಕ್ಕೆ ನನ್ನನ್ನು ಆಹ್ವಾನಿಸಿದ್ದಕ್ಕೆ ನಾನು ಚಿರಋಣಿ ಎಂದರು.

ಮುಖ್ಯ ಅತಿಥಿಗಳಾದ ಗದಗ ಜಿಲ್ಲೆಯ ಶುದ್ಧಗಂಗಾ ಮೇಲ್ವಿಚಾರಕರದ ಧರ್ಮರಾಜ ಬಿ ಮಾತನಾಡಿ, 12ನೇ ಶತಮಾನದಲ್ಲಿ ಬಸವಣ್ಣನವರು ವಚನಗಳ ಮೂಲಕ ಸಾಮಾಜಿಕ ಅನಿಷ್ಟ ಪದ್ಧತಿಗಳನ್ನು ಹೋಗಲಾಡಿಸಿದರು. ಹಾಗೆಯೇ ಪ್ರಸ್ತುತ ಈ ಶಿಕ್ಷಣ ಸಂಸ್ಥೆಯು ಬಡ ವರ್ಗದ ಮಕ್ಕಳಿಗೆ ಉಚಿತ ಶಿಕ್ಷಣ ನೀಡಿ ಬಡತನ, ಅನಕ್ಷರತೆ, ನಿರುದ್ಯೋಗ ಮುಂತಾದ ಸಾಮಾಜಿಕ ಸಮಸ್ಯೆಗಳನ್ನು ಹೋಗಲಾಡಿಸುವ ಪ್ರಯತ್ನ ಮಾಡಿದೆ ಎಂದರು.

ಶಾಲೆಯ ಮುಖ್ಯೋಪಾಧ್ಯಾಯರಾದ ಎಂ.ವಿ. ಹವಾಲ್ದಾರ ಶಾಲಾ ವಾರ್ಷಿಕ ವರದಿಯನ್ನು ವಾಚಿಸಿದರು. ಶಾಲೆಯ ಸಿಇಓ ಪಿ.ಎಚ್. ಕಡಿವಾಲ ಪ್ರಾಸ್ತಾವಿಕ ನುಡಿಗಳನ್ನು ಹೇಳಿದರು. ಡಾ. ಗಂಗೂಬಾಯಿ ಪವಾರ ಮತ್ತು ರವಿ ಹೆಬ್ಬಳ್ಳಿ ಕಾರ್ಯಕ್ರಮದ ಕುರಿತು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಶಿಕ್ಷಕಿ ಕಾವೇರಿ ಲಮಾಣಿ ಯವರು ಅತಿಥಿಗಳನ್ನು ಪರಿಚಯಿಸಿದರು.

ಶಿಕ್ಷಕಿಯರಾದ ಜಯಶ್ರೀ ಪುರಮಶೆಟ್ಟಿ ಸ್ವಾಗತಿಸಿದರು, ಎಂ.ಎನ್. ಹುಬ್ಬಳ್ಳಿ ನಿರೂಪಿಸಿದರು, ಎಸ್.ಸಿ. ಪಾಟೀಲ ವಂದಿಸಿದರು. ಈ ಸಂದರ್ಭದಲ್ಲಿ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ಪ್ರಾಚಾರ್ಯರಾದ ಎಂ.ಆರ್. ಡೊಳ್ಳಿನ, ನಿವೃತ್ತ ಮುಖ್ಯೋಪಾಧ್ಯಾಯರಾದ ಜಿ.ಡಿ. ಪಡೇಸುರ, ಎ.ಬಿ. ಬೂದಿಹಾಳ, ಬಿ.ಹೆಚ್. ಜಂತ್ಲಿ, ವಿದ್ಯಾರ್ಥಿ ಪ್ರತಿನಿಧಿ ಮೇಘನಾ ಪುರಮಶೆಟ್ಟಿ, ಸಮಸ್ತ ಶಿಕ್ಷಕ/ಶಿಕ್ಷಕಿಯರು, ಸಿಬ್ಬಂದಿ ವರ್ಗದವರು, ಪಾಲಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಮಾತನಾಡಿ, ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ನಮ್ಮ ಶಾಲೆಗೆ ಹಲವಾರು ರೀತಿಯ ಸಹಾಯವಾಗಿದೆ. ಶಾಲಾ ವಾರ್ಷಿಕ ಸ್ನೇಹ ಸಮ್ಮೇಳನದಿಂದ ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಲು ಸಹಾಯಕವಾಗಿದೆ ಎಂದರು.

### ಸೈಂಟ್‌ಜಾನ್ ಪ್ರಾಥಮಿಕ, ಪ್ರೌಢ ಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮ

# ಮಕ್ಕಳನ್ನು ಸುಸಂಸ್ಕೃತರನ್ನಾಗಿ ಬೆಳೆಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಮಕ್ಕಳಲ್ಲಿ ಸಮಯಪ್ರಜ್ಞೆ, ಶಿಸ್ತು, ಹಿರಿಯರಲ್ಲಿ ಗೌರವ, ಅಧ್ಯಯನಶೀಲತೆ, ಹೊಂದಾಣಿಕೆ ಇನ್ನಿತರೆ ಮಾನವೀಯ ಮೌಲ್ಯಗಳನ್ನು ಪಾಲಕರು ಬೆಳೆಸಬೇಕು. ಅಂದಾಗ ಅವರು ಉತ್ತಮ ನಾಗರಿಕರಾಗಿ ಹೊರಹೊಮ್ಮಲು ಸಾಧ್ಯ ಎಂದು ನಿವೃತ್ತ ಪ್ರಾಚಾರ್ಯ ಕೆ.ಎಚ್. ಬೇಲೂರ ಅಭಿಪ್ರಾಯಪಟ್ಟರು.

1992-93ನೇ ಸಾಲಿನ ಸೈಂಟ್‌ಜಾನ್ ಪ್ರಾಥಮಿಕ ಶಾಲೆಯ 7ನೇ ವರ್ಗದ ಹಾಗೂ 1995-96ನೇ ಸಾಲಿನ ಲೊಯೊಲಾ ಪ್ರೌಢಶಾಲೆಯ 10ನೇ ವರ್ಗದ ವಿದ್ಯಾರ್ಥಿಗಳಿಂದ ನಡೆದ ಗುರುವಂದನಾ ಹಾಗೂ ಸ್ನೇಹಸಮ್ಮಿಲನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.



ಉದ್ಘಾಟಕರಾಗಿ ಆಗಮಿಸಿದ ಮುಖ್ಯೋಪಾಧ್ಯಾಯೆ ಮೇರಿ ಮಸ್ಕರೇನ್ಹಸ್ ಮಾತನಾಡಿ, ಸಮಯವನ್ನು ನಾವು ಗೌರವಿಸಿದರೆ, ನಮ್ಮನ್ನು ಗೌರವಿಸುವ ಸಮಯ ಬಂದೇ ಬರುತ್ತದೆ. ಆ ನಿಟ್ಟಿನಲ್ಲಿ ನಾವು ಸತತ ಪ್ರಯತ್ನದೊಂದಿಗೆ ಮುನ್ನಡೆದಾಗ ನಮ್ಮ ಜೀವನ ಸಫಲವಾಗುತ್ತದೆ ಎಂದರು.

ಫಾದರ ಜೇಕಬ್ ಆ್ಯಂಟೆನಿ ಮಾತನಾಡಿ, ವೈದ್ಯರಿಲ್ಲದೊಡೆ ಆರೋಗ್ಯವಿಲ್ಲ, ವಕೀಲರಿಲ್ಲದೊಡೆ ನ್ಯಾಯವಿಲ್ಲ, ಪೊಲೀಸರಿಲ್ಲದೊಡೆ ಭದ್ರತೆ ಇಲ್ಲ, ವಿಜ್ಞಾನಿಗಳಿಲ್ಲದೊಡೆ ತಂತ್ರಜ್ಞಾನವಿಲ್ಲ. ಆದರೆ ಶಿಕ್ಷಕರಿಲ್ಲದೊಡೆ ಇವರ್ಯಾರೂ ಇಲ್ಲ. ಇಂತಹ ಅಕ್ಷರಲೋಕದ ನಕ್ಷತ್ರಗಳನ್ನು ಸೃಷ್ಟಿಸಿದ ಅಸಾಮಾನ್ಯ ಶಿಕ್ಷಕರನ್ನು ನೀವು ಗುರುವಂದನಾ ಕಾರ್ಯಕ್ರಮ ಆಯೋಜಿಸುವುದರ ಮೂಲಕ ಅಭಿನಂದಿಸುತ್ತಿಡಿರುವುದು ಸ್ತುತ್ಯಾರ್ಹ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಶಿಕ್ಷಕ ವಿ.ಆರ್. ಕುಂಬಾರ ಮಾತನಾಡಿ, ಹಣ, ಆಸ್ತಿ ಕದಿಯಬಹುದು. ಆದರೆ ವಿದ್ಯೆ ಯಾರಿಂದಲೂ ಕದಿಯಲಾಗದು. ಶಿಕ್ಷಣ ಕೇವಲ ಓದು, ಬರಹ ಮಾತ್ರವಲ್ಲ ಜೊತೆಗೆ ವಿನಯ, ವಿಧೇಯತೆ ಹಾಗೂ ಸಮಾಜದಲ್ಲಿ ಗೌರಯುತವಾಗಿ ಹೇಗೆ ಬದುಕಬೇಕೆಂಬುದನ್ನು ಅರಿತು ನಡೆದುಕೊಳ್ಳುವುದೇ ಶಿಕ್ಷಣವಾಗಿದೆ ಎಂದರು.

ರಾಜಶೇಖರ ವಸ್ತ್ರದ, ಪ್ರಶಾಂತ ಇಳಕಲ್, ಫಮೀದಾ ಕಣವಿ, ಸಿದ್ಧಪ್ಪ ಕಾಟಾಪೂರ, ಆನಂದ ಮಿಠಡೆ ತಮ್ಮ ಶಾಲಾ ಜೀವನದ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಎಲ್ಲ ಶಿಕ್ಷಕರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಲಲಿತಾ ಅಳವಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಭುವನೇಶ್ವರಿ ಹಿರೇಮಠ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಡಾ. ಶಮೀಮ ಕಲಬುರ್ಗಿ ಸ್ವಾಗತಿಸಿದರೆ, ಕಲಾವತಿ ಬ.ಸಂಕನಗೌಡರ ಕಾರ್ಯಕ್ರಮವನ್ನು ನಿರೂಪಿಸಿದರು. ಡಾ. ಸಂತೋಷ ಬುಜರಿ ವಂದಿಸಿದರು.

## ಇಂದು ಮಾಹಿತಿ ಆಯೋಗ ನ್ಯಾಯಾಲಯ ಪೀಠ-2 ರಲ್ಲಿ ವಿಚಾರಣೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಮಾಹಿತಿ ಆಯೋಗ ನ್ಯಾಯಾಲಯ ಪೀಠ-2 ರ ವಿಚಾರಣೆಯನ್ನು ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿರುವ ಆಯೋಗದ ಪೀಠದಲ್ಲಿ ಇಂದು ಫೆ.12 ರಂದು ಏರ್ಪಡಿಸಲಾಗಿದೆ. ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಕಕ್ಷಿದಾರರು ಹಾಜರಾಗಬಹುದು. ಈ ಹಿಂದೆ ಕಳುಹಿಸಿದ್ದ ನೋಟಿಸ್‌ನಲ್ಲಿ ಬೆಳಗಾವಿ ಪೀಠ ಎಂದು ನಮೂದಿಸಿರುವುದನ್ನು ಕರ್ನಾಟಕ ಮಾಹಿತಿ ಆಯೋಗದ ನ್ಯಾಯಾಲಯ ಪೀಠ -2 ಎಂದು ಓದಿಕೊಳ್ಳಲು ಆಯೋಗದ ಕಾರ್ಯದರ್ಶಿಗಳಾದ ಸುಷ್ಮಾ ಗೋಡಬೋಲೆ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗೃಹ ರಕ್ಷಕದಳದ ವಿವಿಧ ಘಟಕಗಳಲ್ಲಿ ಖಾಲಿ ಇರುವ ಒಟ್ಟು 51 ಸ್ವಯಂ ಸೇವಕ ಗೃಹ ರಕ್ಷಕ ಸದಸ್ಯ ಸ್ಥಾನಗಳಲ್ಲಿ ನೋಂದಣಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಸೇವೆಯು ನಿಷ್ಕಾಮ ಸೇವೆಯಾಗಿದ್ದು ಯಾವುದೇ ರೀತಿಯ ಮಾಸಿಕ ಸಂಬಳ ಇರುವುದಿಲ್ಲ. ಜಿಲ್ಲೆಯ ಗೃಹರಕ್ಷಕ ದಳದ ಘಟಕಗಳಾದ ಗದಗ, ನರೇಗಲ್ಲ, ನರಗುಂದ, ಗಜೇಂದ್ರಗಡ , ಕುರ್ತಕೋಟಿ ಹಾಗೂ ಲಕ್ಷ್ಮೇಶ್ವರ, ಗದಗ ಜಿಲ್ಲೆಯ ಹಾಗೂ ಎಲ್ಲಾ ತಾಲೂಕಿನ ಅಭ್ಯರ್ಥಿಗಳು ಅರ್ಜಿಗಳನ್ನು ಪಡೆದು ಫೆಬ್ರವರಿ 19 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

### ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯಲ್ಲಿ ಎಸ್.ಆರ್. ಪಾಟೀಲ

# ಗ್ಯಾರಂಟಿ ಯೋಜನೆಗಳು ಜನರ ಬದುಕಿಗೆ ಬೆಳಕಾಗಲಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯ ಸರಕಾರವು ಬಡ ಹಾಗೂ ಮಧ್ಯಮ ವರ್ಗದವರ ಅನುಕೂಲಕ್ಕಾಗಿ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನವಾಗಬೇಕು. ಇವುಗಳಿಂದ ಜನರ ಬದುಕಿನಲ್ಲಿ ಬೆಳಕು ಮೂಡಬೇಕೆಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಎಸ್. ಆರ್. ಪಾಟೀಲ ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಬಗ್ಗೆ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು.

ಹುಬ್ಬಳ್ಳಿ-ಧಾರವಾಡಕ್ಕೆ ಹಳ್ಳಿಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಓಡಾಡುವುದರಿಂದ ಬೆಳಿಗ್ಗೆ ಹಾಗೂ ಸಂಜೆ ಸಮಯದಲ್ಲಿ ಸಮಯಕ್ಕೆ ಸರಿಯಾಗಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಬಸ್‌ಗಳ ವ್ಯವಸ್ಥೆಯಾಗಬೇಕು. ಹಳ್ಳಿಗಳಲ್ಲಿಯೂ ಬಸ್ ಸಂಚಾರದ ವ್ಯವಸ್ಥೆಯನ್ನು ಸರಿಯಾಗಿ ಮಾಡಿ. ಯಾರಿಗೂ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಿ ಎಂದು ಹೇಳಿದರು.



ಅಪಾಯದ ಅಂಚಿನಲ್ಲಿರುವ ವಿದ್ಯುತ್ ಕಂಬಗಳು, ಜೋತು ಬಿದ್ದ ತಂತಿಗಳು ಬೆಂಡು ಆಗಿರುವ ಕಂಬಗಳು ಇದರಿಂದ ಸಾರ್ವಜನಿಕರಿಗೆ ಹಾಗೂ ರೈತರಿಗೆ ತೊಂದರೆ ಆಗುತ್ತಿದೆ. ಹೆಸ್ಕಾಂ ಅಧಿಕಾರಿಗಳು ಈ ಕುರಿತು ಗಮನಹರಿಸಿ ಕೂಡಲೇ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಹೇಳಿದರು.

ಯುವನಿಧಿ ಯೋಜನೆಯು ಎಷ್ಟು ಜನರಿಗೆ ಉಪಯೋಗವಾಗಿದೆ, ಅದರಿಂದ ಎಷ್ಟು ಜನರಿಗೆ ಕೆಲಸ ಹುಡುಕುವುದಕ್ಕೆ ಸಹಾಯಕವಾಗಿದೆ ಎಂದು ವರದಿ ತಯಾರಿಸಿ, ಮುಂದಿನ ಸಭೆಯಲ್ಲಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿ ಬಸವಂತ ಪಿ.ಎಸ್. ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ರವೀಂದ್ರ ದ್ಯಾಬೇರಿ ಸಭೆಗೆ ಅಂಕಿಸಖ್ಯೆಗಳ ವಿವರ ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು. ಅನ್ನ ಭಾಗ್ಯ, ಯುವ ನಿಧಿ ಯೋಜನೆಗಳ ಬಾಕಿ ಫಲಾನುಭವಿಗಳಿಗೆ ಪರಿಶೀಲಿಸಿ ಆದಷ್ಟು ಬೇಗ ಸೌಲಭ್ಯ ಕಲ್ಪಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಮುರಗಯ್ಯಾ ವಿರಕ್ತಮಠ, ಅರವಿಂದ ಏಗನಗೌಡರ, ಸುಧೀರ ಗೋಳಾರ, ಅಬ್ದುಲ್ ರಶೀದ್ ಬೋಳಾಬಾಯಿ, ರತ್ನಾ ತೇಗೂರಮಠ ಅವರು ಸಭೆಯಲ್ಲಿ ಉಪಸ್ಥಿತರಿದ್ದು ಮಾತನಾಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಾಧಿಕಾರದ ಸದಸ್ಯರು ಭಾಗವಹಿಸಿದ್ದರು.

## ಮಾಹಾಂತ ಶಿವಯೋಗಿಗಳು ಪವಾಡ ಪುರುಷರು




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬಾಲಲೀಲಾ ಮಾಹಾಂತ ಶಿವಯೋಗಿಗಳು 18ನೇ ಶತಮಾನದಲ್ಲಿ ನಾಡಿನ ಮನೆ ಮಾತಾಗಿದ್ದರು. ಹಲವಾರು ಪವಾಡಗಳನ್ನು ಮಾಡುವ ಮೂಲಕ ವೈರಾಗ್ಯ ಮೂರ್ತಿಯಾದವರು ಎಂದು ಗೋಕಾಕ ಬಸವಬೆಳವಿ ಶರಣಬಸವ ದೇವರು ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ 166ನೇ ಜಾತ್ರಾ ಮಹೋತ್ಸವದ ರಥೋತ್ಸವದ ನಂತರ ಅನುಭಾವ ಗೋಷ್ಠಿ-2ರಲ್ಲಿ ಉಪನ್ಯಾಸ ನೀಡಿ, ಯಾರ ಹಂಗಿಗೂ ಒಳಗಾಗದೆ ನಿರ್ಭಿಡೆಯ ಯೋಗಿಗಳಾಗಿದ್ದ ಇವರು ನಡೆದಿದ್ದೇ ದಾರಿ, ನುಡಿದಿದ್ದೇ ಹಾಡುಗಳಾದವು. ಸಾಮಾನ್ಯ ಜನರ ಸಂಕಷ್ಟಗಳನ್ನು ದೂರಗೊಳಿಸುತ್ತಾ ಸರಳ ಸಹಜ ಭಕ್ತಿಯೇ ಶಿವನೊಲುಮೆಯ ಸಾಧನವೆಂಬುದನ್ನು ಬದುಕಿನ ಮೂಲಕ ತೋರಿಸಿಕೊಟ್ಟವರು ಎಂದರು.

ಸಾನ್ನಿಧ್ಯವನ್ನು ಹಾವೇರಿ ಹುಕ್ಕೇರಿಮಠದ ಸದಾಶಿವ ಮಾಹಾಸ್ವಾಮಿಗಳು ವಹಿಸಿದ್ದರು. ಹೊಸದುರ್ಗದ ಸಾಣೇಹಳ್ಳಿಮಠದ ಪಂಡಿತಾರಾಧ್ಯ ಶಿವಾಚಾರ್ಯ ಮಾಹಾಸ್ವಾಮಿಗಳು, ಮಾಜಿ ಶಾಸಕ ಡಿ.ಆರ್. ಪಾಟೀಲ್, ಯುವ ಮುಖಂಡ ಕೃಷ್ಣಗೌಡ ಎಚ್.ಪಾಟೀಲ, ಶಿವಣ್ಣಾ ನೀಲಗುಂದ, ಜಾತ್ರಾ ಸಮಿತಿ ಅಧ್ಯಕ್ಷ ಕೆ.ಎಲ್. ಕರಿಗೌಡ್ರ ಇದ್ದರು.

### ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ಸ್ಪೆಕ್ಟ್ರಮ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ

# ಸತತಾಭ್ಯಾಸದಿಂದ ಉತ್ತಮ ಜೀವನ ರೂಪಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿ ಜೀವನದಲ್ಲಿ ಸಮಯ, ಶಿಸ್ತು, ಶ್ರದ್ಧೆ, ಸತತಾಭ್ಯಾಸ ರೂಢಿಸಿಕೊಂಡಾಗ ಭವಿಷ್ಯತ್ತಿನಲ್ಲಿ ಉತ್ತಮ ಜೀವನ ಕಂಡುಕೊಳ್ಳಲು ಸಾಧ್ಯ. ಈ ನಿಟ್ಟಿನಲ್ಲಿ ಪಾಲಕರು, ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ ಹೇಳಿದರು.

ಅವರು ಸೋಮವಾರ ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ಸ್ಪೆಕ್ಟ್ರಮ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ನಡೆದ 30ನೇ ವರ್ಷದ ವಾರ್ಷಿಕ ಸ್ನೇಹ ಸಮ್ಮೇಳನದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸರ್ಕಾರ ಶಿಕ್ಷಣ ಇಲಾಖೆಯ ಮೂಲಕ ವಿದ್ಯಾರ್ಥಿಗಳ ಉತ್ತಮ ಭವಿಷ್ಯಕ್ಕಾಗಿ ಹತ್ತು ಹಲವು ಯೋಜನೆಗಳನ್ನು ಜಾರಿಗೊಳಿಸಿ ಗುಣಮಟ್ಟದ ಶಿಕ್ಷಣ ನೀಡುವ ಕಾರ್ಯ ಮಾಡುತ್ತಿದೆ. ವಿದ್ಯಾರ್ಥಿಗಳು ದೇಶದ ಸಂಪತ್ತಾಗಿದ್ದರಿಂದ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡುವ ಮೂಲಕ ಉತ್ತಮ ಪ್ರಜೆಗಳ ತಯಾರಿಯು ನಮ್ಮೆಲ್ಲರ ಕಾರ್ಯವಾಗಿದೆ ಎಂದರು.




ಸಂಸ್ಥೆಯ ಕಾರ್ಯದರ್ಶಿ ಲೋಹಿತ ನೆಲವಿಗಿ ಮಾತನಾಡಿ, ವಿದ್ಯಾರ್ಥಿಗಳು ಸದಾ ಸಕಾರಾತ್ಮಕ ಚಿಂತನೆ ಅಳವಡಿಸಿಕೊಳ್ಳಿ. ನಮ್ಮ ಜೀವನದ ರೂವಾರಿಗಳು ನಾವೇ ಆಗಿದ್ದೇವೆ. ಬದಲಾಗಿ ನಮಗೆ ಚಿತ್ರನಟರು, ಕ್ರಿಕೆಟ್ ಆಟಗಾರರು, ರಾಜಕೀಯ ವ್ಯಕ್ತಿಗಳಲ್ಲ. ನಮ್ಮ ತಂದೆ ತಾಯಿ, ಪಾಲಕರು ಹಾಗೂ ಗುರುಗಳೆ ನಮಗೆ ರೋಲ್ ಮಾಡೆಲ್‌ಗಳು ಎಂದು ಹೇಳಿದ ಅವರು, ವಿದ್ಯಾರ್ಥಿಗಳು ಶ್ರದ್ಧೆ, ಸತತ ಅಭ್ಯಾಸದಿಂದ ಕಲಿಕೆಯಲ್ಲಿ ಉತ್ತಮ ಸಾಧನೆ ಮಾಡುವ ಮೂಲಕ ಹೆತ್ತವರು ಮತ್ತು ಗುರುಗಳಿಗೆ ಕೀರ್ತಿ ತರಬೇಕು. ಮಕ್ಕಳನ್ನು ಸಮಾಜದ ಸಂಪತ್ತಾಗಿಸಲು ಸಂಸ್ಥೆಯು ವಿಶೇಷ ಜವಾಬ್ದಾರಿಯನ್ನು ತೆಗೆದುಕೊಂಡು ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಮಾಡುವ ಕಾರ್ಯದಡಿಯಲ್ಲಿ ಹಲವಾರು ಉಪಯುಕ್ತ ಕಾರ್ಯಕ್ರಮಗಳನ್ನು ರೂಪಿಸಿಕೊಂಡಿದೆ. ಇದೀಗ ಎಲ್ಲೆಡೆ ಪರೀಕ್ಷೆಗಳು ಸಮೀಪಿಸುತ್ತಿದ್ದು, ವಿದ್ಯಾರ್ಥಿಗಳು ಓದಿನೆಡೆ ವಿಶೇಷ ಆದ್ಯತೆ ನೀಡಿ ಯಶಸ್ಸು ಗಳಿಸುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕಿರುತೆರೆಯ ಹಾಸ್ಯ ನಟರಾದ ಗಿಲ್ಲಿ ನಟ, ವಾಣಿಗೌಡ, ಅಪ್ಪಣ್ಣ ಅವರು ನೀಡಿದ ವಿಶೇಷ ಹಾಸ್ಯ ಕಾರ್ಯಕ್ರಮಗಳು ಆಗಮಿಸಿದ್ದ ಸಾವಿರಾರು ಪಾಲಕರು ಮತ್ತು ಮಕ್ಕಳಿಗೆ ರಸದೌತಣ ನೀಡಿತು. ಸುಮಾರು 2 ಗಂಟೆಗಳ ಕಾಲ ವಿಶೇಷವಾದ ಹಾಸ್ಯ ಪ್ರಸಂಗಗಳು ನಗೆಗಡಲಲ್ಲಿ ತೇಲುವಂತೆ ಮಾಡಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಲತಾದೇವಿ ನೆಲವಿಗಿ ವಹಿಸಿದ್ದರು. ವೇದಿಕೆಯಲ್ಲಿ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ, ಸಂಸ್ಥೆಯ ನಿರ್ದೇಶಕರಾದ ಡಾ. ರೇವತಿ ನೆಲವಿಗಿ, ಶಿಲ್ಪಾ ನೆಲವಿಗಿ, ತಾಲೂಕಾ ದೈಹಿಕ ಪರೀಕ್ಷಾಣಾಧಿಕಾರಿ ಎನ್.ಎಂ. ಹವಳದ, ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಿಆರ್‌ಪಿ ಉಮೇಶ ನೇಕಾರ, ಕಾರ್ಯಕ್ರಮದ ಉಸ್ತುವಾರಿ ಹಾಗೂ ಆಡಳಿತಾಧಿಕಾರಿ ನಾಗರಾಜ ಯಂಡಿಗೇರಿ ಉಪಸ್ಥಿತರಿದ್ದರು.

### ನಂದಿ ಕೃಷಿ ಆಧಾರಿತ ರೈತರ ಜಾಗೃತಿ । ಜೋಡೆತ್ತಿನ ಕೃಷಿಕರಿಗೆ ಸನ್ಮಾನ

# ಸಾವಯವ ಕೃಷಿ ಪದ್ಧತಿಗೆ ಒತ್ತು ನೀಡಿ




■ ವಿಜಯಸಾಕ್ಷಿ ಸುದ್ದಿ, ಗದಗ

ಸಾವಯವ ನೈಸರ್ಗಿಕ ಕೃಷಿಗೆ ನಾವಿಂದು ಹೆಚ್ಚಿನ ಒತ್ತು ನೀಡುವ ಮೂಲಕ ಆಕಳು, ಎತ್ತು (ನಂದಿ) ಮೇಕೆ, ಕುರಿಗಳ ಸಮೇತ ಒಕ್ಕಲುತನ ಚಟುವಟಿಕೆಗಳಿಂದ ಭೂಮಿಯ ಹದ ಕಾಪಾಡುವುದಲ್ಲದೆ, ನಮ್ಮ ಸದೃಢ ಆರೋಗ್ಯವನ್ನು ಕಾಯ್ದುಕೊಳ್ಳಬಹುದಾಗಿದೆ ಎಂದು ಕಪೋತಗಿರಿಯ ನಂದಿವೇರಿಮಠದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು ಹೇಳಿದರು.

ಅವರು ಗದಗ ಒಕ್ಕಲಗೇರಿ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಗೋ ಸೇವಾ ಗತಿವಿಧಿ ಕರ್ನಾಟಕ, ರಾಧ ಸುರಭಿ ಗೋಮಂದಿರ, ರಾಷ್ಟ್ರೀಯ ಗೋ ಸೇವಾ ಸಂಸ್ಥಾನ ಟ್ರಸ್ಟ್ ಬಂಟ್ವಾಳ, ಗದಗ ಸಂಘಟನೆಯಿಂದ ನಂದಿ ರಥಯಾತ್ರೆಯ ನಿಮಿತ್ತ ಏರ್ಪಡಿಸಿದ್ದ ಜೋಡೆತ್ತಿನ ಕೃಷಿಕರ ಸನ್ಮಾನ, ನಂದಿ ಕೃಷಿ ಆಧಾರಿತ ರೈತರ ಜಾಗೃತಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಆಧುನಿಕ ಜೀವನ ಶೈಲಿಯಿಂದಾಗಿ ನಾವಿಂದು ಹೈಟೆಕ್ ಜೀವನ ನಡೆಸುತ್ತಿದ್ದೇವೆ. ಸಾಫ್ಟ್‌ವೇರ್ ಇಂಜಿನಿಯರ್, ಡಾಕ್ಟರ್ ಎಂದು ನಮ್ಮ ಮಕ್ಕಳಿಗೆ ಶಿಕ್ಷಣ ನೀಡಿ ಅವರನ್ನು ದೊಡ್ಡ ದೊಡ್ಡ ಪಟ್ಟಣಗಳಿಗೆ ಕಳುಹಿಸುತ್ತಿದ್ದೇವೆ. ಹೀಗಾಗಿ ಒಕ್ಕಲುತನಕ್ಕೆ ಸಿಗಬಹುದಾದ ಮಹತ್ವ ಸಿಗುತ್ತಿಲ್ಲ. ಒಕ್ಕಲುತನ ಮಾಡುವವರಿಗೆ ಕನ್ಯೆ ಕೊಡಲಾರದ ಪರಿಸ್ಥಿತಿ ಉಂಟಾಗಿದೆ ಎಂದರು.

ಕೃಷಿಗೆ ಎತ್ತುಗಳ ಬದಲು ಟ್ರ್ಯಾಕ್ಟರ್ ಬಳಕೆ ಆಗುತ್ತಿದ್ದು, ಇದರಿಂದಾಗಿ ಎತ್ತುಗಳ ಸಂತತಿ ಇಳಿಮುಖವಾಗುತ್ತಿದೆ. ರೈತರು ಎತ್ತುಗಳನ್ನು ಮಾರಾಟ ಮಾಡಬಾರದು. ಎತ್ತುಗಳು ರೈತರ ಬದುಕನ್ನು ಎತ್ತರಿಸಬಲ್ಲವು. ಇಂದು ಮನೆಯಲ್ಲಿ ರೊಟ್ಟಿ ಮಾಡುವವರ ಸಂಖ್ಯೆ ಕಡಿಮೆ ಆಗುತ್ತಿದೆ. ಹೋಟೆಲ್, ಪಿಜ್ಜಾ ಬರ್ಗರ್ ಭರಾಟೆಯಲ್ಲಿ ನಮ್ಮ ಯುವಕರು ಆರೋಗ್ಯಕ್ಕೆ ತೆ-ೂಂದರೆ ಮಾಡಿಕೊಳ್ಳುತ್ತಿದ್ದಾರೆ. ಇದು ಬದಲಾಗಬೇಕು. ರೊಟ್ಟಿ ಊಟ ಮಾಡಿ ಗಟ್ಟಿಯಾಗಿ ಜಟ್ಟಿಯಂತೆ ಕೆಲಸ ಮಾಡಬೇಕು. ಇದರಿಂದ ಆರೋಗ್ಯವೂ ಸದೃಢಗೊಳ್ಳುವದು ಎಂದು ಶಿವಕುಮಾರ ಮಹಾಸ್ವಾಮಿಗಳು ತಿಳಿಸಿದರು.

ಸಂಪತ್ತಿಗೆ ಮಹತ್ವ ಕೊಟ್ಟ ಪರಿಣಾಮವಾಗಿ ಸಂಬಂಧಗಳಿಗೆ ಹಾನಿ ಉಂಟಾಗುತ್ತಿದೆ. ದೂರದ ರಾಜ್ಯ, ವಿದೇಶಗಳಲ್ಲಿರುವ ಮಕ್ಕಳು ಹಣ ಗಳಿಸುತ್ತಿದ್ದಾರೆ. ತಂದೆ-ತಾಯಿ, ಸಂಬಂಧಿಕರ ಸಂಬಂಧಗಳು ದೂರ ಆಗುತ್ತಿವೆ. ಕೃಷಿಯಲ್ಲೂ ಹೊಸತನ, ಆಧುನಿಕ ಕೃಷಿಯಲ್ಲಿ ಸಾಧನೆ ತೋರಿಸಲು ಮಕ್ಕಳಿಗೆ ಪ್ರೇರಣೆ ನೀಡಬೇಕು ಎಂದರು.

ಸಮಾರಂಭದಲ್ಲಿ ಜೋಡೆತ್ತಿನ ಕೃಷಿಕರಾದ ಬಸವರಾಜ ಜಕ್ಕಲಿ, ಫಕ್ಕಣ್ಣ ಯಲಿಗಾರ, ಶೇಖಪ್ಪ ಸಗಣಿ, ಮಹೇಶ ಜಕ್ಕಲಿ, ಮಲ್ಲೀಕಸಾಬ, ಪ್ರಕಾಶ ಕುರುಬರ, ಮಾರುತಿ ಜಕ್ಕಲಿ, ಹುಸೇನಸಾಬ ಢಾಲಾಯತ, ಇಸ್ಮಾಯಿಲ್ ಶರೀಫ ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯ ಮೇಲೆ ಗೋ ಸೇವಾ ಗತಿವಿಧಿ ಉತ್ತರ ಪ್ರಾಂತ ಪ್ರಶಿಕ್ಷಣ ಟೋಳಿ ಸದಸ್ಯ ರವಿ ಹಡಪದ, ನಂದಿಯಾತ್ರೆಯ ಸಂಘಟಿಕ ಧನುಷ್, ಬಾಬಣ್ಣ ಜಕ್ಕಲಿ, ಶೇಖಪ್ಪ ಹೊಂಬಳ, ಅಶ್ವಿನಿ ಜಗತಾಪ, ನಾಗರತ್ನ ಹಡಪದ ಉಪಸ್ಥಿತರಿದ್ದರು. ರವಿ ಹಡಪದ ನಿರೂಪಿಸಿ ವಂದಿಸಿದರು. ಸಮಾರಂಭದಲ್ಲಿ ಒಕ್ಕಲಗೇರಿಯ ಗಣ್ಯರು ಹಾಗೂ ರೈತರು ಪಾಲ್ಗೊಂಡಿದ್ದರು.

ಕಾರ್ಯಕ್ರಮಕ್ಕೂ ಮುನ್ನ ನಗರದ ತೋಂಟದಾರ್ಯ ಮಠದಿಂದ ಆರಂಭಗೊಂಡ ನಂದಿ ರಥಯಾತ್ರೆಯು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ರಾಚೋಟೇಶ್ವರ ದೇವಸ್ಥಾನವನ್ನು ತಲುಪಿತು.

## ಸರ್ಕಾರಕ್ಕೆ ಮನವಿ ಸಲ್ಲಿಕೆಗೆ ನಿರ್ಧಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಚಲವಾದಿ ಸಮುದಾಯವನ್ನು ಶೈಕ್ಷಣಿಕವಾಗಿ, ಆರ್ಥಿಕವಾಗಿ ಅಭಿವೃದ್ಧಿಪಡಿಸುವ ಸಲುವಾಗಿ ರಾಜ್ಯದ ಚಲವಾದಿ ಸಮಾಜದ ಸಚಿವರು ಶಾಸಕರು ಮತ್ತು ಶ್ರೀಗಳು ಮುಂದಾಗಿರುವ ಕಾರಣ ಗದಗ ಜಿಲ್ಲೆಯ ಚಲವಾದಿ ಸಮುದಾಯದ ಸಮಗ್ರ ಸಮಸ್ಯೆಗಳನ್ನು ಮತ್ತು ಅಭಿವೃದ್ಧಿಗೆ ಪೂರಕವಾಗುವ ಅಂಶಗಳನ್ನು ಸಮೀಕ್ಷೆಗಳ ಮೂಲಕ ಕಂಡುಕೊಂಡು ಗದಗ ಜಿಲ್ಲೆ ಸಂಪೂರ್ಣ ಯೋಜನಾ ವರದಿಯನ್ನು ತಯಾರಿಸಲಾಗುವುದು ಎಂದು ಕನಾಟಕ ರಾಜ್ಯ ಚಲವಾದಿ ಮಹಾಸಭಾ ಬೆಂಗಳೂರ ಗದಗ ಜಿಲ್ಲಾ ಅಧ್ಯಕ್ಷ ಎಲ್.ನಾರಾಯಣಸ್ವಾಮಿ ಹೇಳಿದರು.

ಅವರು ಗದಗ ನಿರೀಕ್ಷಣಾ ಮಂದಿರದಲ್ಲಿ ಗದಗ ಜಿಲ್ಲಾ ಯೋಜನಾ ವರದಿ ತಯಾರಿಸುವ ಚಿಂತನ-ಮಂಥನ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.



ನಾವು ಕಂಡಂತೆ ಸುಮಾರ 25 ವರ್ಷಗಳ ಕಾಲ ಗದಗ ಜಿಲ್ಲೆಯಲ್ಲಿ ಚಲವಾದಿ ಸಮುದಾಯದ ಕುಂದು ಕೊರತೆಗಳನ್ನು ನಿವಾರಿಸುವ ಮನಸ್ಸು ಯಾವುದೇ ರಾಜಕೀಯ ನಾಯಕರು ಮಾಡಲಿಲ್ಲ. ಚಲವಾದಿ ಸಮುದಾಯಕ್ಕೆ ಪ್ರತಿಯೊಂದು ತಾಲೂಕಿನಲ್ಲಿ ಸಮುದಾಯ ಭವನಗಳಿಲ್ಲ. ಶೈಕ್ಷಣಿಕವಾಗಿ ಮುಂದುವರೆಯುವ ವಿದ್ಯಾರ್ಥಿಗಳಿಗಳಿಗೆ ಪ್ರೋತ್ಸಾಹ ಇಲ್ಲ. ಇಂತಹ ಅನೇಕ ಸಮಸ್ಯೆಗಳ ನಡುವೆ ಸಮುದಾಯದ ಮಕ್ಕಳು ಪ್ರಗತಿಯನ್ನು ಕಾಣುತ್ತಿದ್ದಾರೆ. ಇನ್ನಷ್ಟು ಪ್ರೋತ್ಸಾಹ ಸಿಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಗ್ರಾಮ ಲೆಕ್ಕಾಧಿಕಾರಿ ಎಚ್.ಡಿ. ದೊಡ್ಡಮನಿ ವಹಿಸಿದ್ದರು. ಹೊಂಬಳ ಗ್ರಾ.ಪಂ ಸದಸ್ಯರಾದ ಬಸವರಾಜ ಹುಣಸಿಮರದ, ಚಲವಾದಿ ಸಮುದಾಯದ ಮುಖಂಡರಾದ ಪ್ರಕಾಶ ಕೆಲೂರು, ರಮೇಶ ಬಾಳಮ್ಮನವರ, ಸಿದ್ದಪ್ಪ ಲಿಂಗದಾಳ, ರವಿ ಕರಬಸಣ್ಣವರ, ಬಸಪ್ಪ ಸಣ್ಣಕ್ಕಿ, ಲೋಹಿತ್ ಬಿಳೆಯಲಿ, ಯಮನೂರಪ್ಪ ಹೊಸಳ್ಳಿ, ಮಹಾಂತೇಶ ಮದ್ದೂರ, ಯಲ್ಲಪ್ಪ ನಡುವಿನಮನಿ, ಬಸವರಾಜ ಚಲವಾದಿ, ಪರಶುರಾಮ ದನದಮನಿ ಮುಂತಾದವರು ಉಪಸ್ಥಿತರಿದ್ದರು.

ಮಂಜುನಾಥ ದೊಡ್ಡಮನಿ ಸ್ವಾಗತಿಸಿದರು. ಬಸವರಾಜ ಸತ್ಯಮ್ಮನವರ ಕಾರ್ಯಕ್ರಮ ನಿರೂಪಿಸಿದರು. ಅರುಣ ಅಸೂಟಿ ವಂದಿಸಿದರು.

## ದಾಸೋಹಕ್ಕೆ ಲಿಂಗಾಯತ ಮಠಗಳ ಕೊಡುಗೆ ದೊಡ್ಡದು

▶▶ ಮೊದಲನೇ ಪುಟದಿಂದ

ಕಾರಣ ಸಮಾಜಬಾಂಧವರು ಬಹಳಷ್ಟು ಗಂಭೀರವಾಗಿ ಚಿಂತನೆ ಮಾಡಿ ಸಂಘಟನೆಗೆ ಮುಂದಾಗಬೇಕು. ಗದಗ ಜಿಲ್ಲೆಯಲ್ಲಿ ವೀರಶೈವ ಮಹಾಸಭಾವನ್ನು ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ತಾವೂ ಮಾರ್ಗದರ್ಶನ ಮಾಡಿ ಸಾಥ್ ನೀಡುವದಾಗಿ ಹೇಳಿದರು.

ಸಮ್ಮುಖ ವಹಿಸಿದ್ದ ಅಬ್ಬಿಗೇರಿಯ ಯಲ್ಲಾಲಿಂಗೇಶ್ವರ ಮಠದ ಪೂಜ್ಯ ಬಸವರಾಜ ಬಸವರಡ್ಡೇರ ಸ್ವಾಮೀಜಿ, ಮಹಾಸಭಾದ ರಾಜ್ಯ ಉಪಾಧ್ಯಕ್ಷ ಅಮರೇಗೌಡ ಬಯ್ಯಾಪೂರ, ರಾಜ್ಯ ಕಾರ್ಯಕಾರಿಣಿ ಮಂಡಳಿಯ ಸದಸ್ಯ ಸಂಗನಗೌಡ ಪಾಟೀಲ ಮಹಾಸಭಾದ ಸಂಘಟನೆ ಬಲವರ್ಧನೆಗೆ ಕೈಗೊಂಡಿರುವ ಕ್ರಮಗಳನ್ನು ವಿವರಿಸಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಮಹಾಸಭಾದ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿದರು. ವೇದಿಕೆಯ ಮೇಲೆ ಸಮಾಜದ ಹಿರಿಯರಾದ ಮಾಜಿ ಸಚಿವ ಎಸ್.ಎಸ್. ಪಾಟೀಲ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ಶಿವಬಸಯ್ಯ ಗಡ್ಡದಮಠ ಸಂಗಡಿಗರು ಪ್ರಾರ್ಥಿಸಿದರು, ಸುರೇಖಾ ಪಿಳ್ಳೆ ಗಣಸ್ತುತಿ ಮಾಡಿದರು. ಜಿಲ್ಲಾ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ ಸ್ವಾಗತಿಸಿ ನಿರೂಪಿಸಿದರು. ಕೊನೆಗೆ ಚನ್ನವೀರಪ್ಪ ಹುಣಶೀಕಟ್ಟಿ ವಂದಿಸಿದರು. ವೇದಿಕೆಯ ಮೇಲೆ ಜಿಲ್ಲೆಯ ಎಲ್ಲ ತಾಲೂಕು ಘಟಕಗಳ ಅಧ್ಯಕ್ಷ ಕಾರ್ಯದರ್ಶಿಗಳಾದ ಮಹೇಶ ಕೋಟಿ, ಸಂಗಮೇಶ ಕವಳಿಕಾಯಿ, ಅಪ್ಪಣ್ಣ ನಾಯ್ಕರ್, ಅಜಿತಗೌಡ ಪಾಟೀಲ, ಶಿವನಗೌಡ್ರ ಡೋಣಿ, ಸಿದ್ಧನಗೌಡ್ರ ಪಾಟೀಲ, ಅನೀಲಕುಮಾರ ತೆಗ್ಗಿನಕೇರಿ, ಮಲ್ಲಿಕಾರ್ಜುನ ರಡ್ಡೇರ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka